ಸಂಪುಟ : 4 ಸಂಚಿಕೆ : 09 ಪುಟ : 4 ಬೆಲೆ : ರೂ. 4 ಶುಕ್ರವಾರ, ಫೆಬ್ರುವರಿ, 17, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ



# ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 09 Pages : 4 Rate : 4 Rs Friday, February 17, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com

## ಗುತ್ತಿಗೆ ಆಧಾರದ ನೇಮಕಾತಿಗೂ ಮೀಸಲಾತಿ ಜಾರಿ: ಸಿಎಂ ಬೊಮ್ಮಾಯಿ

ಬೆಂಗಳೂರು: ಸರ್ಕಾರದ ಇಲಾಖೆಯಲ್ಲಿ ಗುತ್ತಿಗೆ ಆಧಾರದ ನೇಮಕಾತಿಗೂ ಮೀಸಲಾತಿ ಜಾರಿ ಮಾಡುತ್ತೇವೆ ಅಂತ ಸಿಎಂ ಬಸವರಾಜ್ ಬೊಮ್ಮಾಯಿ ಘೋಷಣೆ ಮಾಡಿದ್ದಾರೆ.




ವಿಧಾನ ಪರಿಷತ್ ಕಲಾಪದ ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿಯ ಛಲವಾದಿ ನಾರಾಯಣಸ್ವಾಮಿ ಪ್ರಶ್ನೆ ಕೇಳಿದರು. ಗುತ್ತಿಗೆ ಆಧಾರದಲ್ಲಿ ಆಗೋ ನೇಮಕಾತಿ ಮೀಸಲಾತಿ ಜಾರಿ ಮಾಡಿ. ಕೇವಲ ಸರ್ಕಾರ ಹುದ್ದೆಗೆ ಮಾತ್ರ ಮೀಸಲಾತಿ ಜಾರಿ ಮಾಡಿದರೆ ಸಾಲದು. ಸರ್ಕಾರಿ ಇಲಾಖೆಗೆ ಗುತ್ತಿಗೆ ಆಧಾರದ ನೇಮಕಾತಿಗೂ ಮೀಸಲಾತಿ ಜಾರಿ ಮಾಡುವಂತೆ ಒತ್ತಾಯ ಮಾಡಿದರು.

ಇದಕ್ಕೆ ಉತ್ತರ ನೀಡಿದ ಸಿಎಂ ಬೊಮ್ಮಾಯಿ, ಈಗಾಗಲೇ ಎಲ್ಲಾ ಸರ್ಕಾರಿ ಹುದ್ದೆ ನೇಮಕಾತಿಯಲ್ಲಿ ಮೀಸಲಾತಿ ಜಾರಿ ಆಗಿದೆ. ಹೊಸ ನೇಮಕಾತಿಯಲ್ಲಿ ಮೀಸಲಾತಿ ಕೊಟ್ಟೆ ಕೊಡುತ್ತೇವೆ. ಎಲ್ಲಾ ನೇಮಕಾತಿಯಲ್ಲಿ ಸಂವಿಧಾನದ ಪ್ರಕಾರ ಮೀಸಲಾತಿ ಕೊಡ್ತೀವಿ. ಇದರಲ್ಲಿ ಎರಡು ಮಾತಿಲ್ಲ ಎಂದರು.

ಗುತ್ತಿಗೆ ಆಧಾರದಲ್ಲಿ ನೇಮಕ ಮಾಡೋರಿಗೂ ಮೀಸಲಾತಿ ಪಾಲನೆ ಮಾಡಬೇಕು ಅಂತ ಆದೇಶ ಮಾಡ್ತೀವಿ. ಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡೋದು ಔಟ್ ಸೋರ್ಸ್‌ನಿಂದ ಆಗುತ್ತದೆ. ಹೀಗಿದ್ರು ಇನ್ನು ಮುಂದೆ ಗುತ್ತಿಗೆ ಆಧಾರದಲ್ಲಿ ನೇಮಕ ಮಾಡಿಕೊಳ್ಳೋರಿಗೆ ಮೀಸಲಾತಿ ನಿಯಮ ಪಾಲನೆ ಮಾಡಲು ಸೂಚನೆ ನೀಡುತ್ತೇನೆ ಅಂತ ಸ್ಪಷ್ಟಪಡಿಸಿದರು.

## ಐದು ಕ್ಷೇತ್ರಗಳಿಗೆ ಅಭ್ಯರ್ಥಿಗಳ ಹೆಸರು ಪ್ರಕಟಿಸಿದ ಜನಾರ್ದನ ರೆಡ್ಡಿ

ಕೊಪ್ಪಳ: ಕಲ್ಯಾಣ ರಾಜ್ಯ ಪ್ರಗತಿ ಪಕ್ಷ ಸ್ಥಾಪಿಸಿ ರಾಜಕೀಯದಲ್ಲಿ ಎರಡನೇ ಇನ್ನಿಂಗ್ಸ್ ಆರಂಭಿಸಿರುವ ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ, ಮುಂದಿನ ವಿಧಾನಸಭಾ ಚುನಾವಣೆಗೆ ತಮ್ಮ ಪಕ್ಷದ (ಏಖಕಕ) ಅಭ್ಯರ್ಥಿಗಳ ಹೆಸರು ಪ್ರಕಟಿಸಿದ್ದಾರೆ.



ಕೊಪ್ಪಳ ಜಿಲ್ಲೆ ಗಂಗಾವತಿಯಲ್ಲಿ ಇಂದು ಐದು ಕ್ಷೇತ್ರಗಳಿಗೆ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಅಭ್ಯರ್ಥಿಗಳ ಹೆಸರು ಪ್ರಕಟಿಸಿದರು. ಸಿರುಗುಪ್ಪ, ಕನಕಗಿರಿ, ನಾಗಠಾಣ, ಸಿಂಧನೂರು ಹಾಗೂ ಹಿರಿಯೂರು ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಣೆ ಮಾಡಿದರು. ಬಳ್ಳಾರಿ ಜಿಲ್ಲೆ ಸಿರುಗುಪ್ಪ ವಿಧಾನಸಭಾ ಕ್ಷೇತ್ರಕ್ಕೆ–ಧರೆಪ್ಪ ನಾಯಕ, ಕೊಪ್ಪಳ ಜಿಲ್ಲೆಯ ಎಸ್ಸಿ ಮೀಸಲು ಕ್ಷೇತ್ರವಾಗಿರುವ ಕನಕಗಿರಿಗೆ–ಡಾ.ಚಾರುಲ್ ದಾಸರಿ, ವಿಜಯಪುರ ಜಿಲ್ಲೆ ನಾಗಠಾಣ ಕ್ಷೇತ್ರಕ್ಕೆ–ಶ್ರೀಕಾಂತ್, ರಾಯಚೂರು ಜಿಲ್ಲೆ ಸಿಂಧನೂರು ಕ್ಷೇತ್ರ–ನೆಕ್ಕಂಟಿ ಮಲ್ಲಿಕಾರ್ಜುನ, ಚಿತ್ರದುರ್ಗ ಜಿಲ್ಲೆ ಹಿರಿಯೂರು ಕ್ಷೇತ್ರ–ಮಹೇಶ್.

ಸರ್ವೇ ಮಾಡಿಯೇ ಅಭ್ಯರ್ಥಿ ಘೋಷಣೆ: ಈ ಐದು ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನ ಘೋಷಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ರೆಡ್ಡಿ, ಅವರು ಗೆಲ್ಲುತ್ತಾರೆ ಎನ್ನೋ ನಂಬಿಕೆಯಿಂದ ಅಭ್ಯರ್ಥಿ ಘೋಷಣೆ ಮಾಡಿದ್ದೇವೆ. ಸರ್ವೇ ಮಾಡಿಸಿ ಗೆಲ್ಲುವ ಅಭ್ಯರ್ಥಿಗಳನ್ನ ಘೋಷಣೆ ಮಾಡುತ್ತಿದ್ದೇವೆ. ನಾನು ಒಂದೇ ಕ್ಷೇತ್ರದಿಂದ ಸ್ಪರ್ಧೆ ಮಾಡುತ್ತೇನೆ ಎಂದು ಸ್ಪಷ್ಟಪಡಿಸಿದರು. ಒಟ್ಟಿನಲ್ಲಿ ಹೊಸ ಪಕ್ಷದೊಂದಿಗೆ ರಾಜ್ಯ ರಾಜಕಾರಣದಲ್ಲಿ ಸಂಚಲನ ಮೂಡಿಸಿರುವ ರೆಡ್ಡಿ ಗೇಮ್ ಪ್ಲ್ಯಾನ್ ಎಷ್ಟರ ಮಟ್ಟಿಗೆ ವರ್ಕೌಟ್ ಆಗುತ್ತೆ ಎನ್ನುವುದನ್ನು ಕಾದುನೋಡಬೇಕಿದೆ.

### ಕಾಂಗ್ರೆಸ್‌ನಲ್ಲಿ 10 ಮಂದಿ ಸಿಎಂ ರೇಸ್ ನಲ್ಲಿದ್ದಾರೆ;

## ಆ ಹತ್ತು ಮಂದಿಯಲ್ಲಿ ನಾನೂ ಒಬ್ಬ: ಡಾ ಜಿ ಪರಮೇಶ್ವರ್

**ಮಧುಗಿರಿ (ತುಮಕೂರು):** ಕಾಂಗ್ರೆಸ್ನಲ್ಲಿ ಸಿಎಂ ಗಾದಿಗೆ ಆಕಾಂಕ್ಷಿಗಳ ಪಟ್ಟಿ ಬೆಳೆಯುತ್ತಲೇ ಇದೆ, ಈ ವಿಷಯದಲ್ಲಿ ಕಾಂಗ್ರೆಸ್ ನಾಯಕರು ಆಗಾಗ ಸುದ್ದಿಯಾಗುತ್ತಾರೆ. ಚುನಾವಣೆ ಹೊತ್ತಿನಲ್ಲಿ ಪೈಪೋಟಿ ಬೆಳೆಯುತ್ತಲೇ ಇದೆ. ಸಿದ್ದರಾಮಯ್ಯ, ಡಿ ಕೆ ಶಿವಕುಮಾರ್ ಮಧ್ಯೆ ಈ ವಿಚಾರಕ್ಕೆ ಮುಸುಕಿನ ಗುದ್ದಾಟ ನಡೆಯುತ್ತಿರುತ್ತದೆ. ರೇಸ್ಗೆ ಈಗ ಮತ್ತೊಬ್ಬರ ಸೇರ್ಪಡೆಯಾಗಲಿದ್ದಾರೆ. ಅವರು ಡಾ ಜಿ ಪರಮೇಶ್ವರ್.



ತುಮಕೂರು ಜಿಲ್ಲೆ ಮಧುಗಿರಿಯಲ್ಲಿ ಮಾತನಾಡುವ ವೇಳೆ ದಲಿತ ಸಮುದಾಯದ ನಾಯಕ ಪರಮೇಶ್ವರ್, ಕಾಂಗ್ರೆಸ್ನಲ್ಲಿ 10 ಮಂದಿ ಸಿಎಂ ಆಗುವ ಕನಸು ಹೊತ್ತಿದ್ದಾರೆ, ಆ ಹತ್ತು ಮಂದಿಯಲ್ಲಿ ನಾನೂ ಒಬ್ಬ ಎಂದು ಹೇಳಿದ್ದು, ಸಿಎಂ ಕುರ್ಚಿಗೆ ತಾನು ಕೂಡ ಪ್ರಬಲ ಆಕಾಂಕ್ಷಿ ಎಂದಿದ್ದಾರೆ.

ನಮ್ಮಲ್ಲಿ ಜಾತಿ ಆಧಾರದ ಮೇಲೆ ಮುಖ್ಯಮಂತ್ರಿ ಮಾಡಲ್ಲ, ಯಾರು ಸಮರ್ಥರಿದ್ದಾರೆ ಅಂಥವರನ್ನು ಸಿಎಂ ಮಾಡ್ತಾರೆ. ನಾನು ಯಾಕೆ ರಾಜಕೀಯ ಮಾಡ್ತಾ ಇದ್ದೀನಿ ಹೇಳಿ. ಅಧಿಕಾರಕ್ಕೆ ಬರಬೇಕು ಅಂತ ತಾನೇ ರಾಜಕಾರಣ ಮಾಡ್ತಿರೋದು. ಮುಖ್ಯಮಂತ್ರಿ ಆಗಬೇಕು ಅನ್ನೋ ಆಸೆ ಎಲ್ಲರಿಗೂ ಇರುತ್ತೆ, ಅಧಿಕಾರಕ್ಕೆ ಬಂದ ಮೇಲೆ ಹೈಕಮಾಂಡ್ ತಿರ್ಮಾನ ಮಾಡುತ್ತದೆ ಎಂದರು.

ನಮ್ಮ ಗುರಿ ಮೊದಲು ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವುದು. ನಂತರ ಸಿಎಂ ಯಾರಾಗುತ್ತಾರೆ ಎಂದು ಹೈಕಮಾಂಡ್ ತೀರ್ಮಾನ ಮಾಡುತ್ತದೆ. ಹೈಕಮಾಂಡ್ ತೀರ್ಮಾನಕ್ಕೆ ನಾವೆಲ್ಲರೂ ಬದ್ಧರಾಗಿದ್ದೇವೆ ಎಂದರು.



## ವಿಧಾನಸಭೆ ಚುನಾವಣೆ: ತ್ರಿಪುರಾದಲ್ಲಿ ಶೇ.81.10ರಷ್ಟು ಮತದಾನ

ನವದೆಹಲಿ: ತ್ರಿಪುರಾ ವಿಧಾನಸಭೆ ಚುನಾವಣೆಗೆ ನಡೆದ ಮತದಾನ ಪ್ರಕ್ರಿಯೆ ಮುಕ್ತಾಯವಾಗಿದ್ದು ಸುಮಾರು ಶೇ.81.10ರಷ್ಟು ಮತದಾನವಾಗಿದೆ ಎನ್ನಲಾಗಿದೆ. 60 ಸದಸ್ಯ ಬಲದ ತ್ರಿಪುರಾ ವಿಧಾನಸಭೆಗೆ ನಡೆಯುತ್ತಿರುವ ಚುನಾವಣೆಯಲ್ಲಿ ತ್ರಿಪುರಾದಲ್ಲಿ ಭಾರೀ ಮತದಾನ ನಡೆದಿದೆ. ಮತದಾನ ಮುಕ್ತಾಯದ ವೇಳೆಗೆ ಶೇ.81% ಕ್ಕಿಂತ ಹೆಚ್ಚು ಮತದಾನವಾಗಿದೆ. ಅಂತಿಮ ಅಂಕಿ–ಅಂಶಗಳು ಬಂದಾಗ ಆ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ. ಮಾರ್ಚ್ 2 ರಂದು ಮತಗಳ ಎಣಿಕೆ ನಡೆಯಲಿದೆ.

ಮತದಾನದ ವೇಳೆ ನಡೆದ ಪ್ರತ್ಯೇಕ ಹಿಂಸಾಚಾರದಲ್ಲಿ ಸಿಪಿಐ(ಎಂ) ನಾಯಕ ಮತ್ತು ಎಡಪಕ್ಷದ ಇಬ್ಬರು ಪೋಲಿಂಗ್ ಏಜೆಂಟ್‌ಗಳು ಸೇರಿದಂತೆ ಕನಿಷ್ಠ ಮೂವರು ಗಾಯಗೊಂಡಿದ್ದಾರೆ. 40–45 ಸ್ಥಳಗಳಲ್ಲಿ ಇವಿಎಂ ಅಸಮರ್ಪಕ ನಿರ್ವಹಣೆ ಕಾರ್ಯಗಳು ವರದಿಯಾಗಿವೆ. 'ಬಿಜೆಪಿ ಪರವಾಗಿ ಕಿಡಿಗೇಡಿಗಳು' ಜನರು ಮತದಾನ ಮಾಡದಂತೆ ತೊಂದರೆ ನೀಡುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಮಾಣಿಕ್ ಸರ್ಕಾರ್ ಆರೋಪಿಸಿದ್ದಾರೆ. ತಿಪ್ರಾ ಮೋಥಾ ಮುಖ್ಯಸ್ಥ ಪ್ರದ್ಯೋತ್ ದೆಬ್ಬರ್ಮಾ ಕೂಡ ಆಡಳಿತ ಪಕ್ಷವನ್ನು ದೂಷಿಸಿದ್ದಾರೆ.

ಬಿಜೆಪಿ–ಐಪಿಎಫ್‌ಟಿ, ಸಿಪಿಐ(ಎಂ)–ಕಾಂಗ್ರೆಸ್ ಮೈತ್ರಿಕೂಟ ಮತ್ತು ಹೊಸ ಆಟಗಾರ ತಿಪ್ರಾ ಮೋಥಾ ನಡುವೆ ತ್ರಿಕೋನ ಹೋರಾಟವಿದೆ. ತ್ರಿಪುರಾದಲ್ಲಿ ಅಧಿಕಾರ ಉಳಿಸಿಕೊಳ್ಳಲು ಹವಣಿಸುತ್ತಿರುವ ಬಿಜೆಪಿ 55 ಸ್ಥಾನಗಳಲ್ಲಿ ಸ್ಪರ್ಧಿಸುತ್ತಿದೆ. ಅಕಖ(ಒ) 47 ಸ್ಥಾನಗಳಲ್ಲಿ ಸ್ಪರ್ಧಿಸುತ್ತಿದೆ, ಅದರ ಮಿತ್ರಪಕ್ಷ ಕಾಂಗ್ರೆಸ್ 13 ರಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ.

ಹಿಂದಿನ ರಾಜಮನೆತನದ ಕುಡಿ ಪ್ರದ್ಯೋತ್ ದೆಬ್ಬರ್ಮಾ ನೇತೃತ್ವದ ಖಿಟಕಖಂ ಒಠಿಣಜಚಿ 42 ಸ್ಥಾನಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದು, ತೃಣಮೂಲ ಕಾಂಗ್ರೆಸ್ 28 ಸ್ಥಾನಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. 60 ಸದಸ್ಯ ಬಲದ ತ್ರಿಪುರ ವಿಧಾನಸಭೆಗೆ ಬೆಳಿಗ್ಗೆ 7 ಗಂಟೆಗೆ ಮತದಾನ ಆರಂಭವಾಗಿತ್ತು.

## ಗೋಡ್ಸೆ ಸಂತತಿ ಸೋಲಿಸುವುದೇ ಕಾಂಗ್ರೆಸ್ ಗುರಿ: ಬಿ.ಕೆ. ಹರಿಪ್ರಸಾದ್

ಶಿರಸಿ: ಗೋಡ್ಸೆ ಸಂತತಿಯನ್ನು ಸೋಲಿಸುವುದೇ ಕಾಂಗ್ರೆಸ್ ಗುರಿ ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಬಿ.ಕೆ.ಹರಿಪ್ರಸಾದ್ ಪ್ರತಿಪಾದಿಸಿದರು.



ಮಾಧ್ಯಮದೊಂದಿಗೆ ಮಾತನಾಡಿದ ಅವರು, ಮಹಾತ್ಮಾ ಗಾಂಧಿ ಅವರನ್ನು ಕೊಂದ ಪಕ್ಷ ಬಿಜೆಪಿ. ಭಯೋತ್ಪಾದನೆ ಹುಟ್ಟಿದ್ದೇ ಬಿಜೆಪಿಯ ಮೂಲದಿಂದ ಎಂದು ಆರ್ ಎಸ್ ಎಸ್ ವಿರುದ್ಧವೂ ಪರೋಕ್ಷವಾಗಿ ವಾಗ್ದಾಳಿ ನಡೆಸಿದರು.

ಬ್ರಿಟಿಷರ ಏಜೆಂಟರು ನಮ್ಮನ್ನು ಭಯೋತ್ಪಾದಕರು ಎಂದು ಹೇಳಲೇ ಬೇಕಲ್ಲ ಎಂದೂ ವ್ಯಂಗ್ಯವಾಡಿದರು.

ಬಿಜೆಪಿ ರಾಮನ ಗುತ್ತಿಗೆ ಪಡೆದಂತೆ ಮಾತನಾಡುತ್ತಿದೆ. ಮಹಾತ್ಮಗಾಂಧಿ ಅವರ ರಾಮ ರಾಜ್ಯ ಕನಸೇ ಬೇರೆ. ಬಿಜೆಪಿ ರಾಮ ರಾಜ್ಯವೇ ಬೇರೆ. ಭಯೋತ್ಪಾದಕ ಬೆಂಬಲ ಬಿಜೆಪಿ ನೀಡುತ್ತಿದೆ ಎಂದರು. ನೆರೆಗೆ, ಕರೋನಾ ನೋವಿಗೆ ಬಾರದ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ, ಕೊನೇ ಪಕ್ಷ ವೈಮಾನಿಕ ಸಮೀಕ್ಷೆಯೂ ಮಾಡದವರು ಇಂದು ಪಾಲಿಟಕಲ್ ಟೂರಿಸಂ ಹೆಸರಿನಲ್ಲಿ ಬಿಜೆಪಿ ಮತಕ್ಕಾಗಿ ಓಡಾಟ ಮಾಡುತ್ತಿದ್ದಾರೆ ಎಂದರು.

ಪ್ರಜಾ ಧ್ವನಿ ಹೆಸರಿನಲ್ಲಿ ಕಾಂಗ್ರೆಸ್ ಪಕ್ಷವು ಬಿಜೆಪಿ ದುರಾಡಳಿತ, ದೌರ್ಜನ್ಯವನ್ನು ಜನ ಸಾಮಾನ್ಯರಿಗೆ ತಿಳಿಸುತ್ತಿದೆ. ಬೆಲೆ ಏರಿಕೆ ಆಗಿದೆ. ರಾಜ್ಯದಲ್ಲಿ ಸುರಕ್ಷತೆ ಇಲ್ಲ, ಭ್ರಷ್ಟಾಚಾರ ತಾಂಡವ ಆಡುತ್ತಿದೆ. ಭ್ರಷ್ಟಾಚಾರದ ಬಗ್ಗೆ ಮೋದಿ ಅವರಿಗೆ ಪತ್ರ ಬರೆದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಭೀಮಾ ತೀರದ ರಕ್ತಸಿಕ್ತ ಅಧ್ಯಾಯಕ್ಕೆ ಪೂರ್ಣವಿರಾಮ ಹಾಕಿದ ಎಡಿಜಿಪಿ ಅಲೋಕ್ ಕುಮಾರ್

ವಿಜಯಪುರ: ಭೀಮಾ ತೀರದಲ್ಲಿ ಕಳೆದ ಐದು ದಶಕಗಳಿಂದ ನಡೆದುಕೊಂಡು ಬಂದಿದ್ದ ದ್ವೇಷಪೂರಿತ ವಾತಾವರಣಕ್ಕೆ ಎಡಿಜಿಪಿ ಅಲೋಕ್ ಕುಮಾರ್ ಅಂತ್ಯ ಹಾಡಿದ್ದಾರೆ. ಬೈರಗೊಂಡ ಹಾಗೂ ಚಡಚಣ ಕುಟುಂಬದ ನಡುವೆ ರಾಜಿ ಸಂಧಾನ ನಡೆಸಿದ್ದು, ಈ ಮೂಲಕ 5 ದಶಕಗಳ ರಕ್ತಸಿಕ್ತ ಅಧ್ಯಾಯಕ್ಕೆ ಪೂರ್ಣ ವಿರಾಮ ಬಿದ್ದಂತಾಗಿದೆ. ಭೀಮಾ ತೀರದ ಚಡಚಣ ತಾಲೂಕಿನ ಉಮರಾಣಿಯ ಮಹಾದೇವ ಭೈರಗೊಂಡ ಹಾಗೂ ಮಲ್ಲಿಕಾರ್ಜುನ ಚಡಚಣ ಕುಟುಂಬಗಳ ನಡುವೆ ದಶಕಗಳಿಂದ ಪರಸ್ಪರ ದ್ವೇಷವಿದ್ದು, ಇದರಿಂದಾಗಿ ಹತ್ತಾರು ಕೊಲೆಗಳು ನಡೆದಿದ್ದವು. ಈಗ ಎಡಿಜಿಪಿ ಅಲೋಕ್ ಕುಮಾರ್ ಪ್ರಯತ್ನದಿಂದಾಗಿ ಶಾಂತಿ ನೆಲೆಸುವಂತಾಗಿದೆ. ಚಡಚಣದಲ್ಲಿ ಶಾಂತಿ ಸಭೆ ಕರೆದಿದ್ದ ಎಡಿಜಿಪಿ ಅಲೋಕ್ ಕುಮಾರ್, ಮಹಾದೇವ ಭೈರಗೊಂಡ ಹಾಗೂ ವಿಮಲಾ ಬಾಯಿ ಚಡಚಣ ನಡುವೆ ಸಂಧಾನ ನಡೆಸಿದರು. ಅಲ್ಲದೆ ಮುಂದಿನ ದಿನಗಳಲ್ಲಿ ಯಾವುದೇ ಘಟನೆಗಳು ನಡೆಯದಂತೆ ನೋಡಿಕೊಳ್ಳಲು ತಾಕೀತು ಮಾಡಿದರು.



## ಸಚಿವ ಡಾ.ಸಿ.ಎನ್.ಅಶ್ವತ್ಥನಾರಾಯಣ ವಿರುದ್ಧ ಹಲವೆಡೆ ದೂರು ದಾಖಲು



ಬೆಂಗಳೂರು: ಟಿಪ್ಪು ರೀತಿ ಸಿದ್ದರಾಮಯ್ಯ ಅವರನ್ನು ಹೊಡೆದು ಹಾಕಬೇಕು ಎಂದು ಹೇಳಿಕೆ ನೀಡಿದ್ದಾರೆಂಬ ಆರೋಪಕ್ಕೆ ಸಂಬಂಧಿಸಿ ಸಚಿವ ಅಶ್ವತ್ಥನಾರಾಯಣ ವಿರುದ್ಧ ಬೆಂಗಳೂರು ಸೇರಿ ರಾಜ್ಯದ ಹಲವೆಡೆ ದೂರು ದಾಖಲು ಮಾಡಲಾಗಿದೆ.

'ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅವರಿಗೆ ಕೊಲೆ ಬೆದರಿಕೆ ಹಾಕಿರುವ ಸಚಿವ ಡಾ.ಸಿ.ಎನ್.ಅಶ್ವತ್ಥನಾರಾಯಣ ಅವರ ವಿರುದ್ಧ ಎಫ್‌ಐಆರ್ ದಾಖಲಿಸಿ ಕೂಡಲೇ ಬಂಧಿಸಬೇಕು' ಎಂದು ಬೆಂಗಳೂರು, ಶಿವಮೊಗ್ಗ ಹಾಗೂ ಹುಬ್ಬಳ್ಳಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು, ಸಿದ್ದರಾಮಯ್ಯ ಬೆಂಬಲಿಗರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಸಚಿವರ ಹೇಳಿಕೆಗೆ ವ್ಯಾಪಕ ವಿರೋಧ ವ್ಯಕ್ತವಾದ ಬೆನ್ನಲ್ಲೇ ಅಶ್ವತ್ಥನಾರಾಯಣ ಅವರು ಸ್ಪಷ್ಟನೆ ನೀಡಿದ್ದು, ಮಂಡ್ಯದಲ್ಲಿ ಟಿಪ್ಪು–ಸಿದ್ದರಾಮಯ್ಯ ಹೋಲಿಸಿ ತಾನು ಮಾತಾಡಿದ್ದು, ಸಾಂದರ್ಭಿಕ ಪ್ರಸ್ತಾಪವೇ ವಿನಃ ಯಾವುದೇ ದುರುದ್ದೇಶದ ಮಾತುಗಳಲ್ಲ ಎಂದು ತಿಳಿಸಿದರು.

## ಸಚಿವ ಅಶ್ವಥ್ ನಾರಾಯಣ್ ಹೇಳಿಕೆಗೆ ಶಾಸಕ ಯತ್ನಾಳ್ ಖಂಡನೆ

ಬೆಂಗಳೂರು: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಹೊಡೆದು ಹಾಕಬೇಕು ಎಂಬ ಸಚಿವ ಅಶ್ವಥ್ ನಾರಾಯಣ್ ಹೇಳಿಕೆಯನ್ನು ಬಿಜೆಪಿ ಮುಖಂಡ ಬಸನಗೌಡ ಪಾಟೀಲ್ ಖಂಡಿಸಿದ್ದಾರೆ.

ರಾಜಕೀಯದಲ್ಲಿ ಟೀಕೆಗಳು ಸಹಜ. ಆದರೆ ಇಂತಹ ಹೇಳಿಕೆಯನ್ನು ನಾವು ಒಪ್ಪಲಾಗುವುದಿಲ್ಲ. ಈ ರೀತಿ ಯಾವ ರಾಜಕಾರಣಿಯೂ ಮಾತಾಡಬಾರದು.

ಈ ರೀತಿಯ ನಡವಳಿಕೆಗಳು ರಾಜ–ಕಾರಣಕ್ಕೆ ಶೋಭೆ ತರುವುದಿಲ್ಲ ಎಂದಿದ್ದಾರೆ. ಸೈದ್ಧಾಂತಿಕವಾಗಿ ವ್ಯಕ್ತಿಯನ್ನು ಎದುರಿಸಬೇಕು. ಸಿದ್ಧಾಂತಗಳನ್ನು ಟೀಕಿಸುವ ಮೂಲಕ ವಿರೋಧ ವ್ಯಕ್ತಪಡಿಸಬೇಕು.

ಅದರಾಚೆ ವೈಯಕ್ತಿಕವಾಗಿ ಇಂತಹ ಮಾತುಗಳನ್ನು ಆಡಬಾರದು ಎಂದಿದ್ದಾರೆ.



ಸಿದ್ದರಾಮಯ್ಯ ರಾಜಕೀಯ ಅಂತ್ಯಕ್ಕೆ ಟಿಪ್ಪು ಸುಲ್ತಾನನ ಮೇಲಿನ ಒಲವು ಕಾರಣವಾಗುತ್ತದೆ. ಟಿಪ್ಪುವನ್ನು ಆದರ್ಶ ಮಾಡಿಕೊಂಡವರ ಕತೆಗಳನ್ನು ನಾವು ನೋಡಿದ್ದೇವೆ. ಟಿಪ್ಪು ಖಡ್ಗ ತಂದ, ಮಲ್ಯ ವಿದೇಶಕ್ಕೆ ಓಡಿಹೋದ. ಟಿಪ್ಪು ಸಿನಿಮಾ ತೆಗೆದವರು ನಾಶವಾದರು. ಹಿಂದೂಗಳ ಕಗ್ಗೊಲೆ ನಡೆಸಿದ ಟಿಪ್ಪುವನ್ನು ಕಾಂಗ್ರೆಸ್ ಮೆಚ್ಚಿಕೊಂಡಿದೆ.

ಅದು ಸಹ ಅಂತ್ಯ ಕಾಣಲಿದೆ ಎಂದು ವ್ಯಂಗ್ಯವಾಡಿದ್ದಾರೆ.

ಅಶ್ವಥ್ ನಾರಾಯಣ್ ಹೇಳಿಕೆ: ಚುನಾವಣೆ ಸಮೀಪಿಸುತ್ತಿದ್ದಂತೆಯೇ ರಾಜ್ಯರಾಜಕೀಯದಲ್ಲಿ ನಾಯಕರ ವಾಗ್ದಾಳಿಗಳು ನಡೆಯುತ್ತವೆ. ಅಂತೆಯೇ ಮಂಡ್ಯದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಕಾರ್ಯಕ್ರಮದಲ್ಲಿ ಬುಧವಾರ ಮಾತನಾಡಿದ್ದ ಸಚಿವ ಅಶ್ವಥ್ ನಾರಾಯಣ್, ಮಂಡ್ಯ ಜನರಿಗೆ ರಾಜಕೀಯ ಬದಲಾವಣೆ ಮಾಡುವ ಶಕ್ತಿ ಇದೆ. ಮಂಡ್ಯದವರು ಮನಸ್ಸು ಮಾಡಿದ್ರೆ ಏನು ಬೇಕಾದರೂ ಸಾಧಿಸುತ್ತಾರೆ.

ರಾಜಕೀಯ ದಿಕ್ಸೂಚಿ ಮಂಡ್ಯದಿಂದ ಕಾಣಬೇಕು. ಹೀಗೆ ಮಾಡಲಿಲ್ಲ ಅಂದ್ರೆ ಟಿಪ್ಪು ಸುಲ್ತಾನ್ ಸಿದ್ದರಾಮಯ್ಯ ಅವರು ಅಧಿಕಾರಕ್ಕೆ ಬರುತ್ತಾರೆ. ನಿಮಗೆ ಟಿಪ್ಪು ಬೇಕಾ ಸಾವರ್ಕರ್ ಬೇಕಾ, ಟಿಪ್ಪು ಬೇಡಾ ಅಂದ್ರೆ ಸಿದ್ದರಾಮಯ್ಯ ಅವರನ್ನು ಟಿಪ್ಪು ಕಳುಹಿಸಿದ ಹಾಗೆ ಕಳಿಸಬೇಕು. ಹುರಿಗೌಡ, ನಂಜೇಗೌಡ ಟಿಪ್ಪುವನ್ನು ಹೊಡೆದು ಹಾಕಿದರು.

ಅದೇ ರೀತಿ ಸಿದ್ದರಾಮಯ್ಯರನ್ನು ಹೊಡೆದು ಹಾಕಬೇಕು ಎಂದಿದ್ದರು. ಸಚಿವರು ವಿಷಾದ: ಸಚಿವರ ಹೇಳಿಕೆ ಭಾರೀ ವಿವಾದ ಹುಟ್ಟಿಸಿತ್ತು. ಈ ಬೆನ್ನಲ್ಲೇ ಅಶ್ವಥ್ ನಾರಾಯಣ್ ಅವರು ವಿಷಾದ ವ್ಯಕ್ತಪಡಿಸಿದರು.

ಮಂಡ್ಯದಲ್ಲಿ ಟಿಪ್ಪು–ಸಿದ್ದರಾಮಯ್ಯ ಹೋಲಿಸಿ ತಾನು ಮಾತಾಡಿದ್ದು, ಸಾಂದರ್ಭಿಕ ಪ್ರಸ್ತಾಪವೇ ವಿನಃ ಯಾವುದೇ ದುರುದ್ದೇಶದ ಮಾತುಗಳಲ್ಲ ಎಂದು ತಿಳಿಸಿದರು.

## ಬಿಜೆಪಿ ಶಾಸಕ ಹಾರ್ದಿಕ್ ಪಟೇಲ್ ಬಂಧನಕ್ಕೆ ವಾರಂಟ್

ಸುರೇಂದ್ರನಗರ: ಪಾಟೀದಾರ್ ಸಮುದಾಯದ ನಾಯಕ, ಬಿಜೆಪಿ ಶಾಸಕ ಹಾರ್ದಿಕ್ ಪಟೇಲ್ ವಿರುದ್ಧ ಗುಜರಾತಿನ ಸುರೇಂದ್ರನಗರದ ನ್ಯಾಯಾಲಯವು ಬಂಧನದ ವಾರಂಟ್ ಹೊರಡಿಸಿದೆ.



2017ರ ಗುಜರಾತ್ ವಿಧಾನಸಭಾ ಚುನಾವಣೆಗೂ ಮುನ್ನ ಜಿಲ್ಲೆಯ ಗ್ರಾಮವೊಂದರಲ್ಲಿ ಸರ್ಕಾರದ ಆದೇಶ ಉಲ್ಲಂಘಿಸಿ ರಾಜಕೀಯ ಭಾಷಣ ಮಾಡಿದ ಕಾರಣಕ್ಕೆ ಹಾರ್ದಿಕ್ ವಿರುದ್ಧ ಪ್ರಕರಣ ದಾಖಲಾಗಿತ್ತು.

ವಿಚಾರಣೆಗೆ ಹಾರ್ದಿಕ್ ಪಟೇಲ್ ಗೈರಾದ ಕಾರಣ ಹೆಚ್ಚುವರಿ ಸಿಜೆಎಂ ನ್ಯಾಯಾಧೀಶ ಡಿ.ಡಿ.ಶಾ ಅವರು, ಪಟೇಲ್ ವಿರುದ್ಧ ಬಂಧನದ ವಾರಂಟ್ ಹೊರಡಿಸಿದ್ದಾರೆ.

ಮುಂದಿನ ವಿಚಾರಣೆಗೆ ಅವರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಬೇಕು ಎಂದು ಧ್ರಾಂಗದರಾ ತಾಲ್ಲೂಕಿನ ಪೊಲೀಸ್ ಠಾಣೆಯ ಅಧಿಕಾರಿಗೆ ನಿರ್ದೇಶನ ನೀಡಿದ್ದಾರೆ.

ನ್ಯಾಯಾಲಯದ ಆದೇಶ ಫೆ. 11ರಂದು ತಲುಪಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಖಚಿತಪಡಿಸಿದ್ದಾರೆ. ಹರಿಪರ್ ಗ್ರಾಮದಲ್ಲಿ 2017ರ ನವೆಂಬರ್ 26ರಂದು ಸಭೆ ಆಯೋಜಿಸಲು ವಿಧಿಸಿದ್ದ ಷರತ್ತುಗಳನ್ನು ಹಾರ್ದಿಕ್ ಪಟೇಲ್ ಮತ್ತು ಸಹ ಆರೋಪಿ ಕೌಶಿಕ್ ಪಟೇಲ್ ಉಲ್ಲಂಘಿಸಿದ್ದಾರೆ ಎಂದು ಪೊಲೀಸರು 2018ರ ಜನವರಿ 12ರಂದು ಪ್ರಕರಣ ದಾಖಲಿಸಿದ್ದರು.

2017ರ ನವೆಂಬರ್‌ನಲ್ಲಿ ಧುತಾರ್ಪರ್ ಗ್ರಾಮದಲ್ಲೂ ಸರ್ಕಾರದ ಆದೇಶ ಉಲ್ಲಂಘಿಸಿ ರಾಜಕೀಯ ಭಾಷಣ ಮಾಡಿದ್ದರು ಎಂದು ಆರೋಪಿಸಿ ಹಾರ್ದಿಕ್ ಪಟೇಲ್ ವಿರುದ್ಧ ದೂರು ದಾಖಲಾಗಿತ್ತು.

ಅವರು ಈ ಪ್ರಕರಣದಿಂದ ಕಳೆದ ವಾರವಷ್ಟೇ ಖುಲಾಸೆಯಾಗಿದ್ದರು.

ಆ ವೇಳೆ ಹಾರ್ದಿಕ್ ಪಟೇಲ್ ಅವರು ಪಾಟೀದಾರ್ ಅನಾಮತ್ ಆಂದೋಲನ ಸಮಿತಿ ಮುಖ್ಯಸ್ಥರಾಗಿದ್ದರು.

ಈ ಸಮಿತಿ ನೇತೃತ್ವದಲ್ಲಿ ಪಾಟೀದಾರ್ ಯುವ ಸಮುದಾಯಕ್ಕೆ ಒಬಿಸಿ ಮೀಸಲಾತಿ ಬೇಕೆಂದು ಆಗ್ರಹಿಸಿ ಅವರು ರಾಜ್ಯವ್ಯಾಪಿ ಹೋರಾಟಗಳನ್ನು ನಡೆಸಿದ್ದರು. ಇದು ಹಿಂಸಾಚಾರಕ್ಕೂ ತಿರುಗಿತ್ತು.

ಇದರ ಬೆನ್ನಲ್ಲೇ ಪಟೇಲ್ ಅವರು 2019ರಲ್ಲಿ ಕಾಂಗ್ರೆಸ್ ಸೇರಿದ್ದರು. 2022ರ ಗುಜರಾತ್ ವಿಧಾನಸಭಾ ಚುನಾವಣೆಗೂ ಮುನ್ನ ಅವರು ಕಾಂಗ್ರೆಸ್ ತೊರೆದು, ಬಿಜೆಪಿ ಸೇರಿದ್ದರು. ಬಳಿಕ ಅವರು ಅಹಮದಾಬಾದ್‌ನ ವಿರಾಮಗಾಮ್ ಕ್ಷೇತ್ರದಿಂದ ಬಿಜೆಪಿಯ ಶಾಸಕರಾಗಿ ಆಯ್ಕೆಯಾದರು. ಗುಜರಾತಿನಲ್ಲಿ ಹಾರ್ದಿಕ್ ಪಟೇಲ್ ವಿರುದ್ಧ ಎರಡು ದೇಶದ್ರೋಹ ಪ್ರಕರಣಗಳೂ ಸೇರಿದಂತೆ 12ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿವೆ.

## ಮಲಪ್ರಭಾ, ಘಟಪ್ರಭಾ ನದಿತೀರ ಅತಿಕ್ರಮಣ ತೆರವು: ಪ್ರಸ್ತಾವ ಸಲ್ಲಿಸಲು ಪ್ರಾದೇಶಿಕ ಆಯುಕ್ತ ಎಂ.ಜಿ.ಹಿರೇಮಠ ಸೂಚನೆ

ಬೆಳಗಾವಿ: ಮಲಪ್ರಭಾ ಮತ್ತು ಘಟಪ್ರಭಾ ನದಿ ತೀರಗಳಲ್ಲಿನ ಅತಿಕ್ರಮಣವನ್ನು ತೆರವುಗೊಳಿಸಲು ಮೊದಲ ಹಂತವಾಗಿ ಹಳೆಯ ಉಪಯೋಗದಲ್ಲಿ ಇಲ್ಲದಿರುವ ಬ್ರಿಡ್ಜ್, ಬ್ಯಾರೇಜ್ ತೆರವುಗೋಳಿಸಲು ಹಾಗೂ ಅತಿಕ್ರಮಣಗೊಂಡಿರುವ ಜಮೀನುಗಳ ಗಡಿಗಳಿಗೆ ಕಲ್ಲುಗಳನ್ನು ಹಾಕಿಸಲು ಅಂದಾಜು ಪತ್ರಿಕೆಯನ್ನು ಆದ್ಯತೆ ಮೇರೆಗೆ 10 ದಿನದೊಳಗಾಗಿ ಸಲ್ಲಿಸಬೇಕು ಎಂದು ಪ್ರಾದೇಶಿಕ ಆಯುಕ್ತರಾದ ಎಂ.ಜಿ.ಹಿರೇಮಠ ಅವರು ನೀರಾವರಿ ಇಲಾಖೆಯ ಅಭಿಯಂತರರಿಗೆ ಸೂಚನೆ ನೀಡಿದರು.



ಮಲಪ್ರಭಾ ಹಾಗೂ ಘಟಪ್ರಭಾ ನದಿ ತೀರಗಳಲ್ಲಿನ ಅತಿಕ್ರಮಣವನ್ನು ತೆರವುಗೊಳಿಸುವ ಗುರುವಾರ(ಫೆ.16) ನಡೆದ ವಿಭಾಗದ ಮಟ್ಟದ ವಿಡಿಯೋ ಸಂವಾದದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಲಪ್ರಭಾ ನದಿ ಕಲುಷಿತ; ಪರಿಶೀಲನೆಗೆ ಸೂಚನೆ:

ಬೆಳಗಾವಿ ಜಿಲ್ಲೆಯ ರಾಮದುರ್ಗ ಪಟ್ಟಣದಲ್ಲಿನ ಗಟಾರು ನೀರು ಮಲಪ್ರಭಾ ನದಿಗೆ ಸೇರಿ ಕಲುಷಿತವಾಗುತ್ತಿರುವ ಕುರಿತು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸ್ಥಳ ತನಿಖೆ ಮಾಡಿ ಅಗತ್ಯ ಕ್ರಮ ಕೈಕೊಳ್ಳಬೇಕು ಬೆಳಗಾವಿ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ನದಿತೀರದಲ್ಲಿ ಭವಿಷ್ಯದಲ್ಲಿ ಅತಿಕ್ರಮಣಗೊಳ್ಳದಂತೆ ಸರ್ಕಾರಿ ಜಮೀನನ್ನು ಸಂರಕ್ಷಿಸಲು ಅವಶ್ಯಕ ಸಲಹೆ/ಶಿಫಾರಸ್ಸುಗಳನ್ನು ನೀಡಲು ಬೆಳಗಾವಿ, ಬಾಗಲಕೋಟೆ ಹಾಗೂ ಗದಗ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.

ನೀರಾವರಿ ಇಲಾಖೆ, ಸಣ್ಣ ನೀರಾವರಿ ಇಲಾಖೆ, ಲೋಕೋಪಯೋಗಿ ಇಲಾಖೆ, ಜಿಲ್ಲಾ ಪಂಚಾಯತಿ ಇಂಜಿನಿಯರಿಂಗ್ ಇಲಾಖೆಯ ಅಭಿಯಂತರರು ಈ ಕುರಿತು ಸಮನ್ವಯದೊಂದಿಗೆ ಕಂದಾಯ/ ಭೂಮಾಪನ ಇಲಾಖೆಯ ಸಹಕಾರದೊಂದಿಗೆ ನದಿ ಗಡಿಗಳನ್ನು ಸಂರಕ್ಷಿಸಲು ಮತ್ತು ಪ್ರವಾಹದಿಂದ ಆಗುವ ಹಾನಿಗಳನ್ನು ತಪ್ಪಿಸಲು ನಿಗದಿತ ಅವಧಿಯೊಳಗಾಗಿ ಅವಶ್ಯಕ ಕ್ರಮ ಕೈಗೊಳ್ಳಬೇಕು ಎಂದು ಪ್ರಾದೇಶಿಕ ಆಯುಕ್ತರಾದ ಎಂ.ಜಿ.ಹಿರೇಮಠ ಅವರು ಸೂಚಿಸಿದರು.

ಬೆಳಗಾವಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಬಾಗಲಕೋಟೆ ಹಾಗೂ ಗದಗ ಮತ್ತು ನೀರಾವರಿ ಇಲಾಖೆಯ ಅಧೀಕ್ಷಕ ಇಂಜಿನಿಯರರು/ ಕಾರ್ಯನಿರ್ವಾಹಕ ಇಂಜಿನಿಯರರು, ಹೆಚ್ಚುವರಿ ಆಯುಕ್ತರು (ಭೂ ನಿರ್ವಹಣೆ, ಯೋಜನೆಗಳು ಮತ್ತು ಇತರೆ) ಪ್ರಾದೇಶಿಕ ಆಯುಕ್ತರ ಕಾರ್ಯಾಲಯ ಬೆಳಗಾವಿ, ವಿಶೇಷ ಜಿಲ್ಲಾಧಿಕಾರಿಗಳು(ಭೂಸ್ವಾಧೀನ, ಪುನರ್‌ವಸತಿ, ಮುನರ್ನಿರ್ಮಾಣ), ಬೃಹತ್ ನೀರಾವರಿ ಯೋಜನೆಗಳು ಬೆಳಗಾವಿ, ಪ್ರಾದೇಶಿಕ ಭೂ ದಾಖಲೆಗಳ ಜಂಟಿ ನಿರ್ದೇಶಕರು ಬೆಳಗಾವಿ ವಿಭಾಗ ಮತ್ತು ಇತರ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

### ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆ

# ಬೆಂಬಲ ಬೆಲೆ ಯೋಜನೆಯಡಿ ಖರೀದಿ ಪ್ರಕ್ರಿಯೆ: ಅಗತ್ಯ ಸಿದ್ಧತೆಗೆ ಸೂಚನೆ



ಕೊಪ್ಪಳ: ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಕಡಲೆ ಕಾಳು ಖರೀದಿ ಕೇಂದ್ರ ಸ್ಥಾಪಿಸಿ, ಕಡಲೆಕಾಳು ಖರೀದಿಸುವ ವಿಷಯಕ್ಕೆ ಸಂಬಂಧಿಸಿದಂತೆ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ಎಂ.ಸುಂದರೇಶಬಾಬು ಅವರ ಅಧ್ಯಕ್ಷತೆಯಲ್ಲಿ ಫೆ.15ರಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆ ನಡೆಯಿತು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಈ ಸಭೆಯಲ್ಲಿ 2022–23ನೇ ಸಾಲಿನಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 15 ಖರೀದಿ ಕೇಂದ್ರಗಳನ್ನು ತೆರೆಯಲು ನಿರ್ಧರಿಸಲಾಯಿತು. ಕಡಲೆಗಳು ಖರೀದಿ ಕೇಂದ್ರಗಳಿಗೆ ತಾಲೂಕುವಾರು ನೋಡಲ್ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ನೇಮಿಸುವ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಿತು.

2022–23ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ, ಗುಣಮಟ್ಟದ ಕಡಲೆ ಬೆಳೆಗೆ ಸರಕಾರವು ಪ್ರತಿ ಕ್ವಿಂಟಲ್‌ಗೆ ರೂ.5335 ಕನಿಷ್ಠ ಬೆಂಬಲ ಬೆಲೆ ಘೋಷಿಸಿದೆ. ಜಿಲ್ಲೆಯಲ್ಲಿ ಕೊಪ್ಪಳ ತಾಲೂಕಿನ ಮುದ್ದಾಬಳ್ಳಿ, ಹಿರೇಸಿಂಧೋಗಿ, ಕವಲೂರ, ಅಳವಂಡಿ ಮತ್ತು ಘಟ್ಟರಡ್ಡಿಹಾಳದಲ್ಲಿ, ಕನಕಗಿರಿ ತಾಲೂಕಿನ ನವಲಿ ಮತ್ತು ಕನಕಗಿರಿಯಲ್ಲಿ, ಕುಕನೂರ ತಾಲೂಕಿನ ಕುಕನೂರದಲ್ಲಿ ಹಾಗೂ ಯಲಬುರ್ಗಾ ತಾಲೂಕಿನ ಯಲಬುರ್ಗಾ, ಮುಧೋಳ, ಚಿಕ್ಕನಕೊಪ್ಪ, ಬನ್ನಿಕೊಪ್ಪ ಮತ್ತು ತೊಂಡಿಹಾಳದಲ್ಲಿ ಮತ್ತು ಕುಷ್ಟಗಿ ತಾಲೂಕಿನ ಮೆಣೇದಾಳ ಮತ್ತು ಹನುಮಸಾಗರ ಸೇರಿ ಒಟ್ಟು 15 ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗುವು ಎಂದು ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಸಭೆಗೆ ತಿಳಿಸಿದರು.

ಕೇಂದ್ರ ಖರೀದಿ ಏಜೆನ್ಸಿಯಾಗಿ ನಾಫೆಡ್ ಹಾಗೂ ರಾಜ್ಯದಿಂದ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳವನ್ನು ನೇಮಿಸಲಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ಖರೀದಿ ಏಜೆನ್ಸಿಯಾಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ಇವರನ್ನು ನೇಮಿಸಲಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರಾದ ಟಿ.ಎಸ್. ರುದ್ರೇಶಪ್ಪ ಅವರು ಸಭೆಗೆ ವಿವರಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿಗಳು, ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಬೆಂಬಲ ಬೆಲೆ ದರದಂತೆ ಗುಣಮಟ್ಟದ ಕಡಲೆಕಾಳು ಖರೀದಿ ಪ್ರಕ್ರಿಯೆಯನ್ನು ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಯನ್ವಯ ನಡೆಸಬೇಕು. ಜಿಲ್ಲೆಯ ವಿವಿಧೆಡೆ ಖರೀದಿ ಕೇಂದ್ರಗಳನ್ನು ತೆರೆದು ಸಂಬಂಧಿಸಿದ ಸಂಸ್ಥೆಗಳ ಮೂಲಕ ನೋಂದಣಿ ಕಾರ್ಯ ಮತ್ತು ಖರೀದಿ ಪ್ರಕ್ರಿಯೆಯನ್ನು ಬರುವ ಶನಿವಾರದೊಳಗೆ ಆರಂಭಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕೋವಿಡ್ ಹರಡುವಿಕೆ ಹಿನ್ನೆಲೆಯಲ್ಲಿ ಖರೀದಿ ಕೇಂದ್ರಗಳಲ್ಲಿ ನಿಗದಿತ ಸಾಮಾಜಿಕ ಅಂತರ ಮತ್ತು ನೈರ್ಮಲ್ಯ ಕಾಪಾಡಬೇಕು. ಖರೀದಿ ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ಲೋಪದೋಷಗಳಿಗೆ ಆಸ್ಪದ ನೀಡದಂತೆ ಕ್ರಮ ವಹಸಬೇಕು. ಇದಕ್ಕಾಗಿ ಜಿಲ್ಲಾ ಪೊಲೀಸ್ ಇಲಾಖೆಯ ಅಧಿಕಾರಿಗಳ ಸಹಕಾರ ಪಡೆದುಕೊಳ್ಳಬೇಕು ಎಂದು ಸಲಹೆ ಮಾಡಿದರು.

ರೈತರಿಂದ ಕಡಲೆ ಕಾಳನ್ನು ಖರೀದಿ ಮಾಡುವ ಪೂರ್ವದಲ್ಲಿ ಎಲ್ಲ ಖರೀದಿ ಕೇಂದ್ರಗಳಿಗೆ ಅಗತ್ಯವಿರುವ ಕಂಪ್ಯೂಟರ್, ಆಂಡ್ರೋಯ್ಡ್ ಮೊಬೈಲ್, ಹೊಲಿಗೆಯಂತ್ರ ಮತ್ತು ಇತರೆ ಸಾಮಗ್ರಿಗಳು ಮತ್ತು ಅಗತ್ಯ ಸಿಬ್ಬಂದಿಯೊಂದಿಗೆ ಸಿದ್ಧರಿರಬೇಕು ಎಂದು ಜಿಲ್ಲಾಧಿಕಾರಿಗಳು ಖರೀದಿ ಏಜೆನ್ಸಿದಾರರಿಗೆ ಸಭೆಯ ಮೂಲಕ ಸೂಚನೆ ನೀಡಿದರು.

ಸಮನ್ವಯ ಸಾಧಿಸಿ: ಸರ್ಕಾರದ ಬೆಂಬಲ ಬೆಲೆ ಯೋಜನೆ ಖರೀದಿ ಪ್ರಕ್ರಿಯೆಯಲ್ಲಿ ಅಧಿಕಾರಿಗಳು ಸಕ್ರಿಯ ಪಾಲ್ಗೊಂಡು ಯಾವುದೇ ರೀತಿಯ ನ್ಯೂನ್ಯತೆಗಳು ಬಾರದ ಹಾಗೆ ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸಬೇಕು. ಸಂಬಂಧಿಸಿದ ಅಧಿಕಾರಿಗಳು ಪೂರ್ಣಪ್ರಮಾಣದ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ, ಜಿಲ್ಲಾಧಿಕಾರಿಗಳು ಸೂಚಿಸಿದರು.

ವ್ಯಾಪಕ ಪ್ರಚಾರ ನಡೆಸಿ: ಸರ್ಕಾರದ ಈ ಕ್ರಮದಿಂದ ರೈತ ಬಂಧುಗಳಿಗೆ ಅನುಕೂಲವಾಗಬೇಕು. ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸಿದ ಬಗ್ಗೆ, ಯಾವ ಯಾವ ಕಡೆಗಳಲ್ಲಿ ಖರೀದಿ ಕೇಂದ್ರ ಸ್ಥಾಪಿಸಲಾಗಿದೆ ಎನ್ನುವಂತಹ ವಿಷಯಗಳ ಬಗ್ಗೆ ವ್ಯಾಪಕ ಪ್ರಚಾರ ನಡೆಸಬೇಕು.

ಭಿತ್ತಿ ಪತ್ರಗಳ ಮೂಲಕವೂ ಮಾಹಿತಿ ರವಾನೆಯಾಗಬೇಕು ಎಂದರು. ಅಧಿಕಾರಿಗಳಿಗೆ ಸೂಚನೆ: ಪ್ರತಿ ದಿನ ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಲು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿಗಳಿಗೆ ಸೂಚಿಸಿದರು. ಖರೀದಿ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ನ್ಯೂನ್ಯತೆ ಬಾರದಂತೆ ಕಾರ್ಯನಿರ್ವಹಿಸಲು ಸಹಕಾರಿ ಸಂಘಗಳ ಉಪ ನಿಬಂಧಕರಿಗೆ ಸೂಚಿಸಿದರು. ಖರೀದಿ ಕೇಂದ್ರಗಳಲ್ಲಿ ಸಹಕಾರ ಸಂಘಗಳ ಮೇಲುಸ್ತುವಾರಿ ವಹಿಸಿ ವರದಿ ಮಾಡಲು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಖರೀದಿಸಿದ ಕಡಲೆಕಾಳನ್ನು ಉಗ್ರಾಣಗಳಲ್ಲಿ ಶೇಖರಿಸಿಡಲು ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಉಗ್ರಾಣ ನಿಗಮದ ವ್ಯವಸ್ಥಾಪಕರಿಗೆ ತಿಳಿಸಿದರು.

ರೈತರಲ್ಲಿ ಮನವಿ: ಎಫ್.ಎ.ಕ್ಯೂ., ಗುಣಮಟ್ಟದ ಖರೀದಿ ಪ್ರಕ್ರಿಯೆಯಲ್ಲಿ ರೈತರ ನೋಂದಣಿ ಕಾಲಾವಧಿಯನ್ನು 45 ದಿನಗಳವರೆಗೆ ಹಾಗೂ ಖರೀದಿ ಪ್ರಕ್ರಿಯೆಯನ್ನು 90 ದಿನಗಳವರೆಗೆ ನಿಗದಿಪಡಿಸಿ, ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆ ಪ್ರಾರಂಭಿಸಲಾಗುತ್ತದೆ. ಪ್ರತಿ ಎಕರೆಗೆ ಗರಿಷ್ಠ 4 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಾಲ್‌ನಂತೆ ಎಫ್.ಎ.ಕ್ಯೂ, ಗುಣಮಟ್ಟದ ಕಡಲೆಕಾಳು ಉತ್ಪನ್ನವನ್ನು ಖರೀದಿಸಲು ನಿಗದಿಪಡಿಸಲಾಗಿದೆ. ರೈತರ ಹೆಸರಿನ ಆಧಾರ್ ಸಂಖ್ಯೆ ಜೋಡಣೆಗೊಂಡ ಬ್ಯಾಂಕ್ ಖಾತೆಗೆ ಮಾತ್ರ ಉತ್ಪನ್ನದ ಮೌಲ್ಯವು ಡಿಬಿಟಿ ಮೂಲಕ ಜಮಾ ಆಗುವಂತೆ ಪಾವತಿ ಮಾಡಲು ಕ್ರಮವಹಿಸಲಾಗುತ್ತದೆ. ಜಿಲ್ಲೆಯ ರೈತರು ತಮ್ಮ ಹೆಸರನ್ನು ನೋಂದಣಿ ಮಾಡಿಕೊಂಡು ಬೆಂಬಲ ಬೆಲೆ ಯೋಜನೆಯ ಸದುಪಯೋಗ ಪಡೆಯುವಂತೆ ಜಿಲ್ಲಾಧಿಕಾರಿಗಳು ಸಭೆಯ ಮೂಲಕ ಜಿಲ್ಲೆಯ ರೈತ ಬಾಂಧವರಲ್ಲಿ ಮನವಿ ಮಾಡಿದರು.

ಸಭೆಯಲ್ಲಿ ಆಹಾರ ಇಲಾಖೆಯ ಉಪ ನಿರ್ದೇಶಕರಾದ ಮಲ್ಲಿಕಾರ್ಜುನ, ಕೃಷಿ ಉತ್ಪನ್ನ ಮಾರುಕಟ್ಟೆಯ ಸಮಿತಿಯ ಕಾರ್ಯದರ್ಶಿ ಜಿ ಎಂ ಮರುಳಸಿದ್ಧಯ್ಯ, ಕರ್ನಾಟಕ ಸಹಕಾರ ಮಾರಾಟ ಮಹಾಮಂಡಳದ ವ್ಯವಸ್ಥಾಪಕರಾದ ವಿಶಾಲ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಎನ್.ಬಿ.ತೋಟದ, ಜಿಲ್ಲಾ ವಾರ್ತಾಧಿಕಾರಿ ಗವಿಸಿದ್ಧ ಹೊಸಮನಿ ಹಾಗೂ ಇತರರು ಇದ್ದರು.

## ರಸ್ತೆ ಅಪಘಾತದಲ್ಲಿ ಗಾಯಗೊಂಡ ಶಿಕ್ಷಕಿ ಪುಷ್ಪಾವತಿ ನಿಧನ



ಬಳ್ಳಾರಿ : ತಾಲೂಕಿನ ಹಲಕುಂದಿ ಗ್ರಾಮದ ವಿಬಿಎಸ್ ಮಠದ ಬಳಿ ಫೆ.13ರಂದು ಸಂಭವಿಸಿದ ರಸ್ತೆ ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿದ್ದ ಗ್ರಾಮದ ಸಹಿಪ್ರಾ ಶಾಲೆಯ ಹಿರಿಯ ಶಿಕ್ಷಕಿ ಪುಷ್ಪಾವತಿ(59) ಚಿಕಿತ್ಸೆ ಫಲಕಾರಿಯಾಗದೇ ಗುರುವಾರ ನಸುಕಿನ ಜಾವ ನಿಧನರಾಗಿದ್ದಾರೆ.

ನಗರದ ಟಿಬಿ ಸ್ಯಾನಿಟೋರಿಯಂ ಬಳಿ ಇರುವ ವಿಮ್ಸ್ ಟ್ರಾಮಾಕೇರ್ ಸೆಂಟರ್ ನಲ್ಲಿ ದಾಖಲಾಗಿ ಚಿಕಿತ್ಸೆ ಪಡೆ–ಯುತ್ತಿದ್ದರು.

ಪುಷ್ಪಾವತಿ ಅವರು ಇಬ್ಬರು ಪುತ್ರರು, ಸೊಸೆ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ.

ಕಳೆದ 26 ವರ್ಷಗಳಿಂದ ಹಲಕುಂದಿ ಸಹಿಪ್ರಾ ಶಾಲೆಯಲ್ಲಿ ಅಧ್ಯಾಪಕಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಪುಷ್ಪಾವತಿ ಇದೇ ಮೇ ತಿಂಗಳಲ್ಲಿ ವಯೋ ನಿವೃತ್ತಿ ಹೊಂದುತ್ತಿದ್ದರು.

ವಿದ್ಯಾರ್ಥಿ ಮೆಚ್ಚಿನ ಶಿಕ್ಷಕಿಯಾಗಿದ್ದ ಇವರ ನಿಧನದಿಂದ ಗ್ರಾಮವೇ ಶೋಕತಪ್ತವಾಗಿದೆ. ಮೃತರ ಗೌರವಾರ್ಥ ಶ್ರದ್ಧಾಂಜಲಿ ಅರ್ಪಿಸಿ ಶಾಲೆಗೆ ಒಂದು ದಿನ ರಜೆ ಘೋಷಿಸಲಾಗಿದೆ.

## ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳ ನೇಮಕಾತಿ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಖಾನಾಪೂರ ಮತ್ತು ರಾಯಬಾಗ ತಾಲೂಕಿನ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ (ವ್ಹಿ,ಆರ್,ಡಬ್ಲ್ಯೂ) ಹುದ್ದೆಗಳ ನೇಮಕಾತಿಗಾಗಿ ಆಯಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಇಲಾಖೆಯ ಗ್ರಾಮೀಣ ಪುನರ್ವಸತಿ ಯೋಜನೆ ಅಡಿ ಮಾಸಿಕ 9000 ರೂಗಳ ಗೌರವಧನ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ವಿಕಲಚೇತನ ಅಭ್ಯರ್ಥಿಗಳು ಫೆಬ್ರವರಿ 17, 2023 ರ ಸಂಜೆ 5 ಗಂಟೆಗಳ ಒಳಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ ಕಾರ್ಯಾಲಯ ಖಾನಾಪೂರ ಮತ್ತು ರಾಯಬಾಗ ಇವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಖಾನಾಪೂರ ತಾಲೂಕಿನ ನಾಗರಗಾಳಿ ಗ್ರಾಮ ಪಂಚಾಯಿತಿಯಲ್ಲಿ 1 ಹುದ್ದೆ ಖಾಲಿ ಇರುತ್ತದೆ. ರಾಯಬಾಗ ತಾಲೂಕಿನ ಬೆಕ್ಕೇರಿ(1), ಮೊರಬ(1) ಹಾಗೂ ಹುಬ್ಬರವಾಡಿ(1) ಗ್ರಾಮ ಪಂಚಾಯಿತಿಯಲ್ಲಿ ತಲಾ ಒಂದು ಹುದ್ದೆಗಳು ಖಾಲಿ ಇರುತ್ತವೆ.

**ಷರತ್ತುಗಳು:**

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ವಿಕಲಚೇತನರಾಗಿದ್ದು, ಶೇಕಡ 40 ರಷ್ಟು ವಿಕಲತೆ ಪ್ರಮಾಣ ಹೊಂದಿರತಕ್ಕದ್ದು, ಗ್ರಾಮ ಪಂಚಾಯಿತಿಗಳ ವ್ಯಾಪ್ತಿಗೊಳಪಟ್ಟಿರಬೇಕು. ಅರ್ಜಿದಾರರು ಕನಿಷ್ಠ ಎಸ್ಸೆಸ್ಸೆಲ್ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿದ್ದು, ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಮತ್ತು ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕ ಫೆಬ್ರುವರಿ 17, 2023 ಕ್ಕೆ ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷ ವಯೋಮಿತಿಯಲ್ಲಿರಬೇಕು.

ವಿಕಲಚೇತನ ಮಹಿಳಾ, ಪ. ಜಾತಿ ಮತ್ತು ಪ. ಪಂಗಡದ ಅಭ್ಯರ್ಥಿಗಳು ಹಾಗೂ ಇಲಾಖೆಯ ಯೋಜನೆಗಳ ಬಗ್ಗೆ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉಚಿತ ಬೃಹತ್ ಆರೋಗ್ಯ ತಪಾಸಣ ಶಿಬಿರ

## ರಕ್ತದಾನಮಾಡಿ ಜೀವ ಉಳಿಸಿ: ಪಾಲಿಕೆ ಮಾಜಿ ಸದಸ್ಯ ಎಂ. ರಾಘವೇಂದ್ರ



ಬಳ್ಳಾರಿ : ಬಳ್ಳಾರಿ ನಗರದ ಪ್ರತಿಷ್ಠಿತ ಎಂ.ಜಿ.ಎಂ ಟ್ರಸ್ಟ್.ಹಾಗೂ ರೆಡ್ ಕ್ರಾಸ್ ಸಂಸ್ಥೆ ಜಂಟಿಯಾಗಿ ಉಚಿತ ಬೃಹತ್ ಅರೋಗ್ಯ ತಪಾಸಣ ಶಿಬಿರವನ್ನು ಮಿಲರ್ ಪೇಟೆಯ ಗಂಗಪ್ಪ ಜಿನ್ ನಲ್ಲಿ ಹಮ್ಮಿಕೊಳ್ಳಲಾಗಿತ್ತು. ವೇದಿಕೆಯಲ್ಲಿ ಉಪಸ್ಥಿತರಿದ್ದ ಎಂ.ಜಿ.ಎಂ ಟ್ರಸ್ಟ್‌ನ ಕಾರ್ಯದರ್ಶಿ ಶ್ರೀಮತಿ. ರುಕಿಣ್ಮಿ ದಿವಾಕರಬಾಬು ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿದರು.

ಇಂದಿನ ಯುವ ಪೀಳಿಗೆ ರಕ್ತದಾನ ಮಾಡುವ ಮೂಲಕ ಜೀವ ಉಳಿಸಲು ಮುಂದಾಗಬೇಕು. ಎಂದು ಮಾಜಿ ಮಹಾನಗರ ಪಾಲಿಕೆ ಮಾಜಿ ಸದಸ್ಯ ಎಂ.ರಾಘವೇಂದ್ರ ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮಹಾ ನಗರ ಪಾಲಿಕೆ ಮಾಜಿ ಸದಸ್ಯ ಎಂ ರಾಘವೇಂದ್ರ ಮಾತನಾಡಿ ಆರೋಗ್ಯವೇ ಮಹಾಭಾಗ್ಯ ಎಷ್ಟೇ ಸಂಪತ್ತು ಇದ್ದರು ಆರೋಗ್ಯಕರ ದೇಹವಿದ್ದರೇ ಮಾತ್ರ ಎಲ್ಲವು ಅನುಭವಿಸಲು ಸಾಧ್ಯವಾಗುತ್ತದೆ.

ಪ್ರತಿಯೊಬ್ಬರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿವಹಿಸುವುದರ ಜೊತೆ.ಉಚಿತ ಅರೋಗ್ಯ ಶಿಬಿರದ ಪ್ರಯೋಜನ ಪಡೆಯ ಬೇಕು ವೈದ್ಯರುಗಳ ಸಹ ಜನಸೇವೆಗಾಗಿ ಮುಂದಾಗಿರುವುದು.

ಹೆಚ್ಚಿನ ಜನರು ಸಹ ಭಾಗವಹಿಸಿದ್ದು ನೋಡಿದರೇ ಜನರಲ್ಲಿ ಜಾಗೃತಿ ಮೂಡಿದೆ ಎಂ.ಜಿ.ಎಂ ಟ್ರಸ್ಟ್ ನಿಂದ ಮುಂದಿನ ದಿನಗಳಲ್ಲಿ ಪ್ರತಿವಾರ್ಡನಲ್ಲಿ ಉಚಿತ ಬೃಹತ್ ಆರೋಗ್ಯ ಶಿಬಿರ ಹಮ್ಮಿಕೊಳ್ಳಲಾಗುತ್ತದೆ ಎಂದರು. ರೆಡ್ ಕ್ರಾಸ್ ಸಂಸ್ಥೆಯ ಶಕೀಬ್ ಮಾತನಾಡಿ ಕಣ್ಣಿನ ತಪಾಸಣೆ. ಎಲುಬು ಕೀಲು.ಮಹಿಳೆಯರ ಆರೋಗ್ಯ ತಪಾಸಣೆ ದಂತ ಪರೀಕ್ಷೆ.ರಕ್ತ ದಾನ.ಕಿವಿಮೂಗು ಗಂಟಲು ಪರೀಕ್ಷೆ. ಸೇರಿದಂತೆ ಸಾಮನ್ಯ ತಪಾಸಣೆಯನ್ನು ಹಮ್ಮಿಕೊಳ್ಳಲಾಗಿದೆ. ಇತಂಹ ಶಿಬಿರಗಳನ್ನು ಸಂಸ್ಥೆಗಳು ಉಚಿತ ಆರೋಗ್ಯ ಶಿಬಿರ ಬಡ ಹಾಗೂ ಮಧ್ಯಮ ವರ್ಗದ ಜನರು ಸದುಪಯೋಗ ಪಡಿಸಿಕೊಳ್ಳಬೇಕು.

ಉಚಿತ ಆರೋಗ್ಯ ತಪಾಸಣೆಯ ಜೊತೆ ಉಚಿತ ಮಾತ್ರೆಯ ಜೊತೆ ಹೆಚ್ಚಿನ ಸಮಸ್ಯೆ ಇದ್ದಲ್ಲಿ ಕಣ್ಣಿನ ಆಪರೇಷನ್ ಮತ್ತು ಉಚಿತ ಕನ್ನಡಕವನ್ನು ನೀಡುವುದಾಗಿ ತಿಳಿಸಿದರು.

ರಕ್ತದಾನಿ ದೇವಣ್ಣ ಮಾತನಾಡಿ ರಕ್ತದಾನ ಮಾಡುವುದರಿಂದ ದೇಹದಲ್ಲಿ ಹೊಸ ರಕ್ತ ಮತ್ತು ದೇಹ ಚೈತನ್ಯವಾಗಿರಿಸಬಹುದರ ಜೊತೆ ಇನ್ನೊಬ್ಬರ ಜೀವ ಉಳಿಸಿದ ಮಾನವೀಯತೆ ನಿಮ್ಮದಾಗಿರುತ್ತದೆ ಎಂದರು.

70 ಕ್ಕೂ ಹೆಚ್ಚು ಜನರು ರಕ್ತದಾನ ಶಿಬಿರದಲ್ಲಿ ಭಾಗವಹಿಸಿದ್ದರು. 2 ಸಾವಿರ ಜನತೆ ವಿವಿಧ ತಪಾಸಣೆಯಲ್ಲಿ ಭಾಗವಹಿಸಿದ್ದರು. ಅನ್ನ ದಾಸೋಹ ಕಾರ್ಯಕ್ರಮ ನಡೆಯಿತು.

## ಬಯಲಾಟ ಕಾರ್ಯಕ್ರಮದಲ್ಲಿ ಭಾಗಿಯಾದ ಟಿ.ಹೆಚ್.ಸುರೇಶ್ ಬಾಬು



ಬಳ್ಳಾರಿ : ಬಳ್ಳಾರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರದ ವದ್ದಟ್ಟಿ ಗ್ರಾಮದಲ್ಲಿ ಶ್ರೀ ದುಗ್ಗಲಮ್ಮ ದೇವಿಯ ಕುಂಭಮಹೋತ್ಸವದ ಕಾರ್ಯಕ್ರಮದ ಪ್ರಯುಕ್ತ ಆಯೋಜಿಸಿದ್ದ "ರತಿ ಕಲ್ಯಾಣ ಅರ್ಥಾತ್ ಕೌಂಡ್ಲಿಕನ ವಧೆ" ಬೈಲಾಟ ಕಾರ್ಯಕ್ರಮದಲ್ಲಿ ಕಂಪ್ಲಿ ವಿಧಾನಸಭಾ ಕ್ಷೇತ್ರದ ಜನಪ್ರಿಯ ನಾಯಕರಾದ ಟಿ ಹೆಚ್ ಸುರೇಶ್ ಬಾಬುರವರು ಭಾಗಿಯಾಗಿ ಗ್ರಾಮೀಣ ಕಲೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಿಂದ 30000/– (ಮೂವತ್ತು ಸಾವಿರ ರೂಪಾಯಿಗಳ) ಹಣವನ್ನು ಸಮಸ್ತ ಗ್ರಾಮದ ಎಲ್ಲಾ ಮುಖಂಡರ ಸದಸ್ಯರ, ಕಾರ್ಯಕರ್ತರ, ಕಲಾಭಿಮಾನಿಗಳ, ಸಮ್ಮುಖದಲ್ಲಿ ಆಯೋಜಕರಿಗೆ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾಮದ ಗ್ರಾಮಸ್ಥರು ಪಕ್ಷದ ಕಾರ್ಯಕರ್ತರು ಕಲಾ ಅಭಿಮಾನಿಗಳು ಉಪಸ್ಥಿತರಿದ್ದರು.

# ಜಿಲ್ಲೆಯಲ್ಲಿ ಸರಕಾರಿ ಇಂಜಿನಿಯರಿಂಗ್ ಕಾಲೇಜು ಆರಂಭಕ್ಕೆ ಒತ್ತಾಯ



ಬಳ್ಳಾರಿ : ಬಳ್ಳಾರಿ ಜಿಲ್ಲೆಗೆ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಮೀಸಲಿರುವ ಜಿಲ್ಲಾ ಖನಿಜ ನಿಧಿ, ಕೆ.ಎಂ.ಆರ್.ಇ.ಸಿ. ಅನುದಾನ ವರವಾಗಿದೆ. ಜಿಲ್ಲೆಯ ಸಂಪನ್ಮೂಲವನ್ನು ಬಳಸಿಕೊಂಡು ಬಳ್ಳಾರಿ ಜಿಲ್ಲೆಯಲ್ಲಿ ಜಿಲ್ಲಾ ಕೇಂದ್ರಸ್ಥಾನವಾದ ಬಳ್ಳಾರಿ ನಗರದಲ್ಲಿ ಸರಕಾರಿ ಇಂಜಿನಿಯರಿಂಗ್ ಆರಂಭಿಸಲು ರಾಜ್ಯ ಸರಕಾರ ಮುಂದಾಗಬೇಕೆಂದು ಕರ್ನಾಟಕ ಜನಸೈನ್ಯದ ವತಿಯಿಂದ ಮುಖ್ಯಮಂತ್ರಿಗಳಿಗೆ ಹಾಗೂ ಉನ್ನತ ಶಿಕ್ಷಣ ಸಚಿವರಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸ್ಥಾಪಕ ರಾಜ್ಯಾಧ್ಯಕ್ಷ ಕೆ.ರ್ರಿಸ್ವಾಮಿ ಮಾತನಾಡುತ್ತಾ, ಬಳ್ಳಾರಿ ಜಿಲ್ಲೆ ಕಲೆ, ಸಂಸ್ಕೃತಿ, ಕೃಷಿ, ರಾಜಕೀಯ ಸೇರಿ ನಾನಾ ಕ್ಷೇತ್ರಗಳಲ್ಲಿ ಗಮನಸೆಳೆದಿದೆ.

ರಾಜ್ಯದಲ್ಲಿಯೇ ಅತಿ ಹೆಚ್ಚು ಕೈಗಾರಿಕೋದ್ಯಮಗಳನ್ನು ಹೊಂದುವ ಮೂಲಕ ಕೈಗಾರಿಕೋದ್ಯಮಗಳ ತವರೂರಾಗಿದೆ. ಗಣಿಗಾರಿಕೆ ಮೂಲಕ ರಾಷ್ಟ್ರ ಮಟ್ಟದಲ್ಲೂ ಹೆಸರುವಾಸಿಯಾಗಿದೆ.

ಆದರೆ, ಜಿಲ್ಲೆಯಲ್ಲಿ ಸಾಕ್ಷರತೆ ಪ್ರಮಾಣ ಶೇ. 67.43 ರಷ್ಟಿದೆ. ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಶೈಕ್ಷಣಿಕ ಗುಣಮಟ್ಟ ಸುಧಾರಿಸಲು, ಗುಣಮಟ್ಟದ ಶಿಕ್ಷಣ ನೀಡುವಲ್ಲಿ ರಾಜ್ಯ ಸರಕಾರ ಇಚ್ಛಾಶಕ್ತಿ ತೋರಬೇಕಿದೆ ಎಂದರು.

ಈ ಹಿಂದೆ ಅಖಂಡ ಬಳ್ಳಾರಿ ಜಿಲ್ಲೆಯಾಗಿದ್ದ ಸಂದರ್ಭದಲ್ಲಿ ಇಂಜಿನಿಯರಿಂಗ್ ಪದವಿ ಕಾಲೇಜನ್ನು ಮಾಜಿ ಉಪಮುಖ್ಯಮಂತ್ರಿ ಎಂ.ಪಿ.ಪ್ರಕಾ ಶ್ ಅವರ ಇಚ್ಛಾಶಕ್ತಿಯಿಂದ ಹೂವಿನ ಹಡಗಲಿಯಲ್ಲಿ ಇಂಜಿನಿಯರಿಂಗ್ ಕಾಲೇಜು ಆರಂಭಿಸಲಾಗಿತ್ತು.

ಆದರೆ, ಪ್ರಸ್ತುತ ಬಳ್ಳಾರಿ ಜಿಲ್ಲೆಯಿಂದ ಹೂವಿನಹಡಗಲಿ, ಹರಪನಹಳ್ಳಿ, ಕೂಡ್ಲಿಗಿ, ಕೊಟ್ಟೂರು, ಹಗರಿಬೊಮ್ಮನಹಳ್ಳಿ ಹಾಗೂ ಹೊಸಪೇಟೆ ಸೇರಿ ನೂತನವಾಗಿ ವಿಜಯನಗರ ಜಿಲ್ಲೆಯಾಗಿ ವಿಭಜನೆಗೊಂಡಿದೆ ಎಂದರು.

ಹೀಗಾಗಿ ಬಳ್ಳಾರಿ ಜಿಲ್ಲೆ ಸರಕಾರಿ ಇಂಜಿನಿಯರಿಂಗ್ ಕಾಲೇಜ್‌ನಿಂದ ವಂಚಿತವಾಗಿದೆ.

ಬಳ್ಳಾರಿಯಲ್ಲಿ ಎರಡು ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಿದ್ದು, ಬಡ ವಿದ್ಯಾರ್ಥಿಗಳು ಹೆಚ್ಚಿನ ಹಣವನ್ನು ನೀಡಿ ಕಾಲೇಜು ಸೇರಲು ಕಷ್ಟ ಸಾಧ್ಯವಾಗಿದೆ. ಇದ–ರಿಂದ ಇಂಜಿನಿಯರಿಂಗ್ ಪದವಿ ಕನಸನ್ನು ಹೊತ್ತ ಜಿಲ್ಲೆಯ ಅನೇಕ ವಿದ್ಯಾರ್ಥಿಗಳು ಇಂಜಿನಿಯರಿಂಗ್ ಪದವಿಯಿಂದ ವಂಚಿತರಾಗುವಂತೆ ಮಾಡಿದೆ. ಜಿಲ್ಲೆಯ ಸಾಕ್ಷರತೆ ಪ್ರಮಾಣ ಹೆಚ್ಚಿಸಲು ಹಾಗೂ ಜಿಲ್ಲೆಯಲ್ಲಿ ಸರಕಾರಿ ಇಂಜಿನಿಯರಿಂಗ್ ಕಾಲೇಜು ಆರಂಭಿಸಲು ರಾಜ್ಯ ಸರಕಾರ ಕೂಡಲೇ ಕ್ರಮಕೈಗೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷ ಬಿ.ಹೊನ್ನೂರಪ್ಪ, ಉತ್ತರ ಕರ್ನಾಟಕ ಉಪಾಧ್ಯಕ್ಷರಾದ ಫಯಾಜ್ ಭಾಷ, ಮುಖಂಡರಾದ ನಾಸೀರ್ ಭಾಷ, ಆಯೇಷಾ ಸಿದ್ದಿಕಾ, ಪದ್ಮಾವತಿ, ರೇಖಾ, ಹಸೇನ್, ಸೊಹೈಲ್ ಮತ್ತಿತರರು ಉಪಸ್ಥಿತರಿದ್ದರು.

# ದಕ್ಷಿಣ ಭಾರತ ಸಿಎ ಸಂಸ್ಥೆಯ ಅಧ್ಯಕ್ಷರಾಗಿ ಎಸ್.ಪನ್ನರಾಜ್ ಆಯ್ಕೆ



ಬಳ್ಳಾರಿ : ಭಾರತೀಯ ಸನ್ನದು ಲೆಕ್ಕಿಗರ ಸಂಸ್ಥೆಯ ದಕ್ಷಿಣ ಭಾರತ ಪ್ರಾಂತೀಯ ಪರಿಷತ್ತಿನ ಆಡಳಿತ ಮಂಡಳಿಯ 2023–24ನೇ ಸಾಲಿನ ಚುನಾವಣೆಯು ಗುರುವಾರದಂದು ಚೆನ್ನೈನಲ್ಲಿ ನಡೆಯಿತು. ಕರ್ನಾಟಕ, ಆಂಧ್ರ ಪ್ರದೇಶ, ತೆಲಂಗಾಣ, ತಮಿಳುನಾಡು ಮತ್ತು ಕೇರಳ ರಾಜ್ಯಗಳ ಹಾಗೂ ಪುದಿಚೇರಿ ಕೇಂದ್ರಾಡಳಿತ ಪ್ರದೇಶ ಇವುಗಳನ್ನು ಪ್ರತಿನಿಧಿಸುವ ದಕ್ಷಿಣ ಭಾರತೀಯ ಪ್ರಾಂತೀಯ ಪರಿಷತ್ತಿನ ಅಧ್ಯಕ್ಷರಾಗಿ ಬಳ್ಳಾರಿಯ ಖ್ಯಾತ ಲೆಕ್ಕಪರಿಶೋಧಕ ಪನ್ನರಾಜ್ ಸಿರಿಗೇರಿ ರವರು ಅವಿರೋಧವಾಗಿ ಚುನಾಯಿತರಾಗಿರುತ್ತಾರೆ.

ಅಖಿಲ ಭಾರತ ಲೆಕ್ಕಪರಿಶೋಧಕ ಸಂಸ್ಥೆಯು 1949ರಲ್ಲಿ ಸಂಸತ್ತಿನ ಕಾಯ್ದೆಯ ಮೂಲಕ ಸ್ಥಾಪಿತವಾಗಿದ್ದು ಈ ಸಂಸ್ಥೆಯು ಭಾರತ ಸರ್ಕಾರದ ಕಂಪನಿ ವ್ಯವಹಾರಗಳ ಸಚಿವಾಲಯದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿದೆ. ನವದೆಹಲಿಯಲ್ಲಿ ಕೇಂದ್ರ ಕಛೇರಿಯಿದ್ದು ಐದು ಪ್ರಾಂತೀಯ ಕಛೇರಿಗಳನ್ನು ಹೊಂದಿರುತ್ತದೆ.

ಚೆನ್ನೈನಲ್ಲಿ ದಕ್ಷಿಣ ಭಾರತ ಪ್ರಾಂತೀಯ ಕಛೇರಿ ಸ್ಥಾಪಿತವಾಗಿದೆ. ಭಾರತೀಯ ಲೆಕ್ಕಪರಿಶೋಧಕರ ಸಂಸ್ಥೆಯ 72 ವರ್ಷದ ಇತಿಹಾಸದಲ್ಲಿ ಕರ್ನಾಟಕದಿಂದ ಬೆಂಗಳೂರೇತರ ಅಭ್ಯರ್ಥಿಯೊಬ್ಬರು ಸದರಿ ಪರಿಷತ್ತಿಗೆ ಅಧ್ಯಕ್ಷರಾಗಿ ಆಯ್ಕೆಯಾಗಿರುವುದು ಇದೇ ಮೊಟ್ಟ ಮೊದಲು. ಬಳ್ಳಾರಿಗರಿಗೆ ಇದು ಐತಿಹಾಸಿಕ ಮತ್ತು ಹೆಮ್ಮೆಯ ಕ್ಷಣ. ಎಸ್. ಪನ್ನರಾಜ್‌ರವರು ಪ್ರತಿ ಮೂರು ವರ್ಷಕ್ಕೊಮ್ಮೆ ನಡೆಯುವ ಚುನಾವಣೆಯಲ್ಲಿ ಸತತವಾಗಿ ಮೂರು ಬಾರಿ ಗೆದ್ದು 2023–24ನೇ ಸಾಲಿಗೆ ಅಧ್ಯಕ್ಷ ಹುದ್ದೆಯನ್ನು ಅಲಂಕರಿಸಿರುತ್ತಾರೆ.ಸದರಿ ಚುನಾವಣೆಯಲ್ಲಿ ಸಿಎ ಗೀತ ರವರು ಉಪಾಧ್ಯಕ್ಷರಾಗಿ, ಸೇಲಂ ನ ಸಿಎ ಎ.ವಿ. ಅರುಣ್ ರವರು ಕಾರ್ಯದರ್ಶಿಯಾಗಿ, ಹೈದರಬಾದಿನ ಸಿಎ ಸುನಿಲ್ ಕುಮಾರ್ ಮಾಂಡವ ರವರು ಖಜಾಂಚಿಯಾಗಿ ಆಯ್ಕೆಗೊಂಡಿರುತ್ತಾರೆ ಹಾಗೂ ಹೈದರಬಾದಿನ ಸಿಎ ಚಂಗಲ್ ರೆಡ್ಡಿ ರವರು ವಿದ್ಯಾರ್ಥಿ ವಿಭಾಗಕ್ಕೆ ಅಧ್ಯಕ್ಷರಾಗಿ ನಾಮ ನಿರ್ದೇಶನಗೊಂಡಿರುತ್ತಾರೆ.ಸದರಿ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಬಳ್ಳಾರಿಯ ಸಿಎ ಎಸ್.ಪನ್ನರಾಜ್ ಹಾಗೂ ಉಪಾಧ್ಯಕ್ಷರಾಗಿ ಬೆಂಗಳೂರಿನ ಸಿಎ ಗೀತ ರವರು ಆಯ್ಕೆಯಾಗಿರುವುದು ದಕ್ಷಿಣ ಭಾರತ ಪ್ರಾಂತೀಯ ಪರಿಷತ್ತಿನಲ್ಲಿ ಇಬ್ಬರು ಕನ್ನಡಿಗರಿಗೆ ಅವಕಾಶ ದೊರೆತಿರುವುದು ಕರ್ನಾಟಕಕ್ಕೆ ಹೆಮ್ಮೆಯ ಸಂಗತಿಯಾಗಿದೆ.

ಈ ಸಂದರ್ಭದಲ್ಲಿ ಎಸ್. ಪನ್ನರಾಜ್ ರವರ ಧರ್ಮಪತ್ನಿ ಶ್ರೀಮತಿ ರೇಖಾ ಪನ್ನರಾಜ್ ಅವರನ್ನು ಒಳಗೊಂಡಂತೆ ಬಳ್ಳಾರಿ, ಹೊಸಪೇಟೆ, ಹುಬ್ಬಳ್ಳಿ, ಧಾರವಾಡ, ವಿಜಯಪುರ, ರಾಯಚೂರು, ಮಂಗಳೂರು, ಬೆಂಗಳೂರು ಹಾಗೂ ಇತರೆ ಊರುಗಳಿಂದ ಸುಮಾರು 100ಕ್ಕೂ ಹೆಚ್ಚು ಸನ್ನದು ಲೆಕ್ಕಿಗರು ಈ ಸಂದರ್ಭದಲ್ಲಿ ಚೆನ್ನೈನಲ್ಲಿ ಹಾಜರಿದ್ದರು.

# ಕಾರ್ಮಿಕರ ಸಬಲೀಕರಣಕ್ಕೆ ಕಾನೂನುತ್ಮಕವಾಗಿ ಬೆನ್ನೆಲುಬುವಾಗಿ ನಿಲ್ಲುವೆ: ಎ. ಕೆ.ಚೌದರಿ





ಬಳ್ಳಾರಿ: ಭಾರತದಲ್ಲಿ 60 ಲಕ್ಷಕ್ಕೂ ಹೆಚ್ಚು ಕಾರ್ಮಿಕರು ಭಾರತೀಯ ರಾಷ್ಟ್ರ ಮಜದೂರ್ ಕಾಂಗ್ರೆಸ್ ನಲ್ಲಿ ನೋಂದಣಿ ಮಾಡಿಸಿಕೊಂಡಿರುವ ಸದಸ್ಯರಿದ್ದು ಎಲ್ಲರ ಸಬಲೀಕರಣಕ್ಕೆ ಕಾನೂನುತ್ಮಕವಾಗಿ ಅವರ ಬೆನ್ನೆಲುಬುವಾಗಿ ನಿಲ್ಲುವೆ ಎಂದು ಭಾರತೀಯ ರಾಷ್ಟ್ರೀಯ ಉಪಾಧ್ಯಕ್ಷರಾದ ಎ. ಕೆ.ಚೌದರಿ ಹೇಳಿದರು.

ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ಪಕ್ಷಕ್ಕೆ ಹಲವಾರು ವರ್ಷಗಳಿಂದ ಶ್ರಮಿಸಿದ ಫಲವಾಗಿ ನಮ್ಮ ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷರಾದ ಸ್ವಾಮಿನಾಥನ್ ಅವರು ಈ ಸ್ಥಾನ ನೀಡಿದ್ದಾರೆ ಎಐಸಿಸಿ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವರಿಷ್ಠರಾದ ಸೋನಿಯಾ ಗಾಂಧಿ ರಾಹುಲ್ ಗಾಂಧಿ ಪ್ರಿಯಾಂಕ ಗಾಂಧಿ ರಾಜ್ಯನಾಯಕರಾದ ಡಿಕೆ. ಶಿವಕುಮಾರ್ಮಾ.ಜಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ. ಎಂ ವೀರಪ್ಪ ಮೊಹಿಲಿ ಎಲ್ಲಾ ನಾಯಕರಿಗೆ ಕೃತಜ್ಞತೆಗಳು ಸಲ್ಲಿಸುತ್ತೇನೆ ಎಂದು ಹೇಳಿದರು.

ಅಸಂಘಟಿತ ಶೋಷಿತ ನೌಕರರಿಗೆ ನ್ಯಾಯ ಕೊಡಿಸುವುದಾಗಿ INTUC 1947 ಮೇ 4 ರಂದು ಸ್ಥಾಪನೆಯಾದ ಈ ಸಂಘಟನೆ ಕರ್ನಾಟಕದ 12.50 ಲಕ್ಷ ಕಾರ್ಮಿಕರು ನೌಕರರು ನೋಂದಣಿ ಯಾಗಿದ್ದಾರೆ ಯಾವುದೇ ಕಾರ್ಮಿಕರಿಗೆ ಶೋಷಣೆಯಾಗಲು ನಮ್ಮ ಸಂಘಟನೆ ಬಿಡುವುದಿಲ್ಲ ಕರ್ನಾಟಕ ಘಟಕ ನನ್ನನ್ನು ನಿಯೋಜಿಸಿದ್ದು ಶೀಘ್ರವೇ ರಾಜ್ಯದ ಸಂಚರಿಸಿ ಎಲ್ಲಾ ಕಾರ್ಮಿಕರ ನೌಕರರ ಯೋಗಕ್ಷೇಮದ ಬಗ್ಗೆ ವಿವರಣೆಗಳನ್ನು ಸಂಗ್ರಹಿಸುತ್ತೇನೆ.

ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುವ ಎಲ್ಲಾ ಲಕ್ಷಣಗಳು ನಮ್ಮಿದೆ ಸರ್ಕಾರ ಅಧಿಕಾರ ವಹಿಸಿಕೊಂಡರೆ ಎಲ್ಲಾ ಕಾರ್ಮಿಕರಿಗೆ ನೌಕರರಿಗೆ ಅಗತ್ಯ ಕಾನೂನು ಅಡಿ ಸೌಲಭ್ಯಗಳನ್ನು ಒದಗಿಸುವ ಭರವಸೆ ನೀಡಿದರು ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ದೂರಿಣರಾದ ಕಲ್ಲು ಕಂಬ ಪಂಪಾಪತಿ ಗೋನಾಳ್ ವಿರುಪಾಕ್ಷಗೌಡ ಡಾ.ಧರ್ಮರೆಡ್ಡಿ ಕೆ ತಾಯಪ್ಪ ಅಲುವೇಲು ಸುರೇಶ್ ಹಲವಾರು ಮುಖಂಡರು ಭಾ–ಗಿಯಾಗಿದ್ದರು.

## ರಾಗಿ ಖರೀದಿ ಕೇಂದ್ರದ ಗೋದಾಮಿಗೆ ಬೆಂಕಿ



ರಾಮನಗರ: ಶಾರ್ಟ್ ಸರ್ಕೀಟ್‌ನಿಂದಾಗಿ ರಾಗಿ ಖರೀದಿ ಕೇಂದ್ರದ ಗೋದಾಮಿನಲ್ಲಿ ಬೆಂಕಿ ಅವಘಡ ಸಂಭವಿಸಿರುವ ಘಟನೆ ಮಾಗಡಿ ತಾಲೂಕಿನ ಸೋಲೂರು ಗದ್ದುಗೆ ಮಠದ ಬಳಿ ಗುರುವಾರ ನಡೆದಿದೆ.

ಗೋದಾಮಿನ ಮುಂಭಾಗ ಇದ್ದ ಟ್ರಾನ್ಸ್ ಫಾರ್ಮರ್ ನಿಂದ ಶಾರ್ಟ್ ಸರ್ಕ್ಯೂಟ್ ಆಗಿ ಗೋದಾಮಿಗೆ ಬೆಂಕಿ ತಗುಲಿದೆ ಎನ್ನಲಾಗಿದ್ದು, ರಾಗಿಯನ್ನು ರೈತರಿಂದ ಖರೀದಿ ಮಾಡಿ ಗೋದಾಮಿನಲ್ಲಿ ಶೇಖರಿಸಿಡಲಾಗಿತ್ತು. ಇದರಿಂದ 200 ರಾಗಿ ಮೂಟೆಗಳು ಹಾಗೂ 2 ಲಕ್ಷಕ್ಕೂ ಹೆಚ್ಚು ಖಾಲಿ ಚೀಲಗಳು ಬೆಂಕಿಗಾಹುತಿಯಾಗಿದೆ ಎಂದು ತಿಳಿದು ಬಂದಿದೆ. 4 ಅಗ್ನಿ ಶಾಮಕ ವಾಹನಗಳಲ್ಲಿ ಸ್ಥಳಕ್ಕಾಗಮಿಸಿರುವ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯ ನಡೆಸುತ್ತಿದ್ದಾರೆ.

# 31 ವಿವೇಕ ಶಾಲಾ ಕೊಠಡಿಗಳ ನಿರ್ಮಾಣಕ್ಕೆ 4.37 ಕೋಟಿ ರೂ. ಬಿಡುಗಡೆ : ಶಾಸಕ ಬಾಲಚಂದ್ರ ಜಾರಕಿಹೊಳಿ

ಮೂಡಲಗಿ: ಮಕ್ಕಳ ಸರ್ವಾಂಗೀಣ ವಿಕಾಸಕ್ಕೆ ಶಿಕ್ಷಣ ಕ್ಷೇತ್ರಕ್ಕೆ ಪ್ರಥಮ ಪ್ರಾಶಸ್ತ್ಯ ನೀಡುತ್ತಿದ್ದು, 31 ವಿವೇಕ ಶಾಲಾ ಕೊಠಡಿಗಳ ನಿರ್ಮಾಣಕ್ಕಾಗಿ 4.37 ಕೋಟಿ ರೂ. ಅನುದಾನ ಬಿಡುಗಡೆಯಾಗಿದೆ ಎಂದು ಶಾಸಕ, ಕೆಎಂಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಮಂಗಳವಾರದಂದು ಸಮೀಪದ ಮದಲಮಟ್ಟಿ(ಶಿವಾಪೂರ-ಹ) ಸರ್ಕಾರಿ ಕನ್ನಡ ಗಂಡು ಮಕ್ಕಳ ಶಾಲೆಯ ಆವರಣದಲ್ಲಿ 13.90 ಲಕ್ಷ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಾಣವಾಗಲಿರುವ ವಿವೇಕ ಶಾಲಾ ಕೊಠಡಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವುದಾಗಿ ಅವರು ಹೇಳಿದರು.

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಬೆಟಗೇರಿ, ಬೆಳವಿ ತೋಟ(ಬಳೋಬಾಳ), ಒಳಕಲಮರಡಿ(ದಂಡಾಪೂರ), ಭಗೀರಥ ನಗರ(ಗುಜನಟ್ಟಿ), ಹೊಸಯರಗುದ್ರಿ, ಅಂಬಿಗರ ತೋಟ ನಂ.2(ಹುಣಶ್ಯಾಳ ಪಿಜಿ), ಮುನ್ಯಾಳ ತೋಟ, ಅರಣ್ಯಸಿದ್ಧೇಶ್ವರ ತೋಟ, ನಾಗನೂರ, ಘಾಮಲದಿನ್ನಿ ತೋಟ, ಜೋಕಾನಟ್ಟಿ 2 ಶಾಲೆಗಳ ಪ್ರೌಢ ಶಾಲಾ ಕೊಠಡಿಗಳು, ಕಪರಟ್ಟಿ, ತಳಕಟ್ನಾಳ 3 ಶಾಲೆಗಳ ಕೊಠಡಿಗಳು, ಮಬನೂರ ತೋಟ ತಿಮ್ಮಾಪೂರ-2, ಹೆಣ್ಣು ಮಕ್ಕಳ ಶಾಲೆ ಬೆಟಗೇರಿ-2, ನಿಂಗಾಪೂರ, ಲಕ್ಷ್ಮೇಶ್ವರ, ದುರದುಂಡಿ, ಬಿ.ಪ್ಪಿ. ನರಗುಂದ



ಸರ್ಕಾರಿ ಪ್ರೌಢ ಶಾಲೆ ಸುಣಧೋಳಿ, ಹೊಸಯರಗುದ್ರಿ, ಢವಳೇಶ್ವರ, ತುಕ್ಕಾನಟ್ಟಿ ತೋಟ, ಮದಲಮಟ್ಟಿ(ಶಿವಾಪೂರ-ಹ), ವಿಜಯನಗರ ಮೂಡಲಗಿ, ನಾಗಲಿಂಗ ನಗರ, ಸರ್ಕಾರಿ ಪ್ರೌಢ ಶಾಲೆ ತಳಕಟ್ನಾಳ, ಶಾಲಾ ಕೊಠಡಿಗಳಿಗೆ ತಲಾ 13.90 ಲಕ್ಷ ರೂ. ಗಳಂತೆ ಒಟ್ಟು 4.37 ಕೋಟಿ ರೂ. ಗಳು ಬಿಡುಗಡೆಯಾಗಿದ್ದು, ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಮೂಡಲಗಿ ಶೈಕ್ಷಣಿಕ ವಲಯವು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿದ್ದು, ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುವ ಮೂಲಕ ಜಿಲ್ಲೆಯಲ್ಲಿಯೇ ಉತ್ತಮ ಸಾಧನೆ ಮಾಡುತ್ತಿದೆ ಎಂದು ಬಾಲಚಂದ್ರ ಜಾರಕಿಹೊಳಿ ಅವರು ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಘಟಪ್ರಭಾ ಜೆಜಿ-ಕೋ ನಿರ್ದೇಶಕ ಶಿವನಗೌಡ ಪಾಟೀಲ, ಟಿಎಪಿಸಿಎಂಎಸ್ ನಿರ್ದೇಶಕ ಈಶ್ವರ ಬೆಳಗಲಿ, ಫಯೋನೀಬ ಮಹಾಮಂಡಳ ನಿರ್ದೇಶಕ ಕೆಂಪಣ್ಣಾ ಮುಧೋಳ, ಮಾಜಿ ತಾಪಂ ಸದಸ್ಯ ಶಿವಬಸು ಜುಂಜರವಾಡ, ಶಿವಾಪೂರ(ಹ) ಗ್ರಾಪಂ ಅಧ್ಯಕ್ಷ ಬಸವರಾಜ ಸಾಯನ್ನವರ, ಸತೀಶ ಜುಂಜರವಾಡ, ಶಂಕರ ಮದಲಮಟ್ಟಿ, ಶಿವಬಸು ಮುಗಳಖೋಡ, ರಾಜು ಮದಲಮಟ್ಟಿ, ಬಸು ಮುರಚಟ್ಟಿ, ಶ್ರೀಶೈಲ ಮದಲಮಟ್ಟಿ, ಯಲ್ಲಪ್ಪ ಮದಲಮಟ್ಟಿ, ಈರಪ್ಪ ಕೊಳವಿ, ಮಂಜು ಮದಲಮಟ್ಟಿ, ಮಾರುತಿ ಮದಲಮಟ್ಟಿ, ಸೋಮಪ್ಪ ಮದಲಮಟ್ಟಿ, ಪರಪ್ಪ ಗೊರಗುದ್ದಿ, ಬಸಪ್ಪ ಮುಧೋಳ, ಮೂಡಲಗಿ ಬಿಇಓ ಅಜೀತ ಮನ್ನಿಕೇರಿ, ಸಕಿಪ್ರಾ ಶಾಲೆ ಮದಲಮಟ್ಟಿ ಮುಖ್ಯೋಪಾಧ್ಯಾಯ ಎನ್.ಜಿ. ಹೆಬ್ಬಳ್ಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಮಠಗಳು ಸಂಸ್ಕಾರ ಕೊಡುವ ಕೇಂದ್ರಗಳಾಗಲಿ: ಶ್ರೀ ರಂಭಾಪುರಿ ಜಗದ್ಗುರು

ಶಿರವಾರ: ಭಾರತೀಯ ಸಂಸ್ಕೃತಿಯಲ್ಲಿ ಧರ್ಮಕ್ಕೆ ಬಹಳಷ್ಟು ಮಹತ್ವವಿದೆ. ಬೆಳೆಯುತ್ತಿರುವ ಜನ ಸಮುದಾಯದಲ್ಲಿ ಜಾಗೃತಿ ಮೂಡಿಸುವ ಬಹು ದೊಡ್ಡ ಜವಾಬ್ದಾರಿ ಮಠಗಳ ಮೇಲೆ ಇದೆ. ಸಂಸ್ಕೃತಿ ಉಳಿಸುವ ಸಂಸ್ಕಾರ ಕೊಡುವ ಕಾರ್ಯ ಮಠಗಳಿಂದ ಆಗಬೇಕಾದ ಅಗತ್ಯವಿದೆಯೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ನವಿಲಕಲ್ಲು ಶ್ರೀ ಶಾಂಭವಿ ಸಂಸ್ಥಾನ ಬೃಹನ್ಮಠದ ಅಭಿನವ ಸೋಮನಾಥ ಶಿವಾಚಾರ್ಯ ಸ್ವಾಮಿಗಳ ಪಟ್ಟಾಧಿಕಾರ ದ್ವಾದಶ ವರ್ಧಂತಿ ಮಹೋತ್ಸವ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಆಧ್ಯಾತ್ಮದಲ್ಲಿ ಅದ್ಭುತ ಶಕ್ತಿಯಿದೆ. ಪೂರ್ವದ ಋಷಿ ಮುನಿಗಳು ಮತ್ತು



ಆಚಾರ್ಯರು ಉಳಿಸಿ ಬೆಳೆಸಿಕೊಂಡು ಬಂದಿದ್ದಾರೆ. ವೈಚಾರಿಕತೆ ಮತ್ತು ಸುಧಾರಣೆಯ ಹೆಸರಿನಲ್ಲಿ ಸಂಸ್ಕಾರ ಸಂಸ್ಕೃತಿ ನಾಶಗೊಳಿಸುವ ಕೆಲಸ ನಡೆಯುತ್ತಿದೆ. ಇಂಥ ಸಂದರ್ಭದಲ್ಲಿ ಈ ನಾಡಿನ ಧರ್ಮ ಪೀಠಗಳು ಮತ್ತು ಮಠಾಧೀಶರ ಮೇಲೆ ಉತ್ಕೃಷ್ಟ ಸಂಸ್ಕೃತಿ ಉಳಿಸಿ ಬೆಳೆಸುವ ಜವಾಬ್ದಾರಿಯಿದೆ. ವೀರಶೈವ ಧರ್ಮ ಅತ್ಯಂತ ಪ್ರಾಚೀನವಾಗಿದ್ದು ಸಕಲ ಜೀವಾತ್ಮರಿಗೂ ಒಳಿತನ್ನೇ ಬಯಸುತ್ತಾ ಬಂದಿದೆ. ಬದುಕು ಬದಲಾಗಬೇಕಾದರೆ ಬದುಕುವ ದಾರಿ ಬದಲಾಗಬೇಕಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಶಿವಾದ್ವೈತ ಸಿದ್ಧಾಂತ ಸಕಲರಿಗೂ ದಾರಿದೀಪ. ವ್ಯಕ್ತಿ ವ್ಯಕ್ತಿಗಳ ಮಧ್ಯೆ ಧರ್ಮ ಧರ್ಮಗಳ ಮಧ್ಯೆ ಬಾಂಧವ್ಯದ ಸೇತುವೆ ಕಟ್ಟಬೇಕಲ್ಲದೇ ಗೋಡೆ ನಿರ್ಮಿಸಬಾರದು. ಸ್ವಾರ್ಥ ಸಂಕುಚಿತ ಭಾವನೆಯಿಂದಾಗಿ ಅನೇಕ ಆತಂಕಗಳನ್ನು ಎದುರಿಸುವ ಪರಿಸ್ಥಿತಿ ಬಂದಿದೆ ಎಂದು ವಿಷಾಧಿಸಿದ ಜಗದ್ಗುರುಗಳು ನವಿಲಕಲ್ಲು ಶಾಂಭವಿ ಬೃಹನ್ಮಠದ ಶ್ರೀ ಅಭಿನವ ಸೋಮನಾಥ ಶಿವಾಚಾರ್ಯ ಸ್ವಾಮಿಗಳು ತಮ್ಮ ಅಧಿಕಾರದ 12 ವರುಷದಲ್ಲಿ ಶ್ರೀ ಮಠದ ಅಭಿವೃದ್ಧಿ, ಶಾಂಭವಿ ದೇವಸ್ಥಾನ ನಿರ್ಮಾಣ, ಭವ್ಯ ರಥ ಸಮರ್ಪಣೆ ಹಾಗೂ ಜನ ಸಮುದಾಯದಲ್ಲಿ ಧಾರ್ಮಿಕ ಪ್ರಜ್ಞೆ ಹೆಚ್ಚಿಸಿದ ಕೀರ್ತಿ ಇವರಿಗೆ ಸಲ್ಲುತ್ತದೆ ಎಂದು ಹರುಷ ವ್ಯಕ್ತಪಡಿಸಿ ರೇಶ್ಮೆ ಮಡಿ ಫಲ ಪುಷ್ಪ ಸ್ಮರಣಿಕೆಯನ್ನಿತ್ತು ಶುಭ ಹಾರೈಸಿದರು.

ಗಬ್ಬೂರು ಬೂದಿಬಸವೇಶ್ವರ ಶಿವಾಚಾರ್ಯ ಸ್ವಾಮಿಗಳು, ನೀಲುಗಲ್ಲು ರೇಣುಕ ಶಾಂತಮಲ್ಲ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತ ನೀಡಿದರು. ಅಭಿನವ ಸೋಮನಾಥ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಉತ್ಕೃಷ್ಟ ಮಾನವೀಯ ಮೌಲ್ಯಗಳ ಸಂವರ್ಧನೆಗಾಗಿ ಸದಾ ಶ್ರಮಿಸುವೆ. ಮಠದ ಅಭಿವೃದ್ಧಿಯ ಜೊತೆಗೆ ಸಾಮಾಜಿಕವಾಗಿ ವಿಶೇಷ ಸೇವೆ ಸಲ್ಲಿಸಬೇಕೆಂಬ ಮಹತ್ವಾಕಾಂಕ್ಷೆ ನಮ್ಮದಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದದಿಂದ ಎಲ್ಲವೂ ದೊರಕುವಂತಾಗಲೆಂದು ನುಡಿದರು. ರಾಯಚೂರು ಕಿಲ್ಲಾ ಬೃಹನ್ಮಠದ ಶಾಂತಮಲ್ಲ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ಮಾತಿನಲ್ಲಿ ಧರ್ಮ-ಗುರು ಮಹತ್ವ ಬಲು ಹಿರಿದು. ಅರಿತು ಬಾಳಲು ಗುರು ಕಾರುಣ್ಯ ಅವಶ್ಯಕ. ಅಭಿನವ ಸೋಮನಾಥ ಶ್ರೀಗಳು 12 ವರುಷದಲ್ಲಿ ಅಪಾರ ಪ್ರಗತಿಯನ್ನು ಸಾಧಿಸಿದ್ದಾರೆ ಎಂದರು.

ಸುರೇಶ ಹೀರಾ ಸ್ವಾಗತಿಸಿದರು. ರಾಯಚೂರು ಕಿಲ್ಲಾ ಬೃಹನ್ಮಠದ ಶ್ರೀಗಳು ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಅಭಿನವ ಸೋಮನಾಥ ಶ್ರೀಗಳಿಗೆ ಮಸ್ತಕಾಭಿಷೇಕ, ಹರಿದ್ರಾಲೇಪನ ಮತ್ತು ಮಂಗಲ ಸ್ನಾನದ ನಂತರ ಮುತ್ತೈದೆಯರು ಆರತಿ ಬೆಳಗಿ ಭಕ್ತಿ ಸಮರ್ಪಿಸಿದರು.

# ಚಬನೂರ ; ಇಂದು ಗ್ರಾಮದೇವತೆ ಜಾತ್ರೋತ್ಸವ

ತಾಳಿಕೋಟೆ: ತಾಲೂಕಿನ ಚಬನೂರ ಗ್ರಾಮದಲ್ಲಿ ಶ್ರೀ ಗ್ರಾಮದೇವತೆ ಜಾತ್ರಾ ಮಹೋತ್ಸವವು ಇಂದು ದಿ. 17 ಶುಕ್ರವಾರರಂದು ವಿಜೃಂಬಣೆಯಿಂದ ಜರುಗಲಿದೆ.

ಜಾತ್ರೋತ್ಸವ ಅಂಗವಾಗಿ ಬೆಳಿಗ್ಗೆ ಶ್ರೀ ಗ್ರಾಮದೇವತೆ(ದ್ಯಾಮವ್ವದೇವಿ) ಮೂರ್ತಿಯ ಭವ್ಯ ಮೆರವಣಿಗೆಯು ಗ್ರಾಮದ ಪ್ರಮುಖ ಬೀದಿಗಳಲ್ಲಿ ಜರುಗಿ ನಂತರ ದೇವಸ್ಥಾನದ ಪಾದಗಟ್ಟೆಯಲ್ಲಿ ಕೂಡ್ರಿಸಲಾಗುವದು. ನಂತರ ದೇವಸ್ಥಾನದ ಆವರಣದಲ್ಲಿ ಹೋಮ ಹವನ ಕಾರ್ಯಕ್ರಮಗಳು ಜರುಗುವವು.

ದಿ. 18 ಶನಿವಾರರಂದು ಶ್ರೀ ಗ್ರಾಮದೇವತೆ ಗವಿ ಸೇರುವ ಕಾರ್ಯಕ್ರಮ ಜರುಗಲಿದೆ.

ಜಾತ್ರೋತ್ಸವ ಅಂಗವಾಗಿ ದಿ. 17 ರಂದು ರಾತ್ರಿ 8 ಗಂಟೆಯಿಂದ ಬಬಲೇಶ್ವರದ ಚಿಕ್ಕಪಡಸಲಗಿಯ ಶ್ರೀ ಮಾರುತೇಶ್ವರ ನಾಟ್ಯ ಕಲಾವಿದರ ಸಂಘದಿಂದ ದೈವ ದಾರಿ ಬಿಡಿಸಿತೆ ಅರ್ಥಾರ್ತ ಮಾಡಿದ್ದು ಉಣ್ಣು ಮಾರಾಯ ಎಂಬ ಸುಂದರ ಸಾಮಾಜಿಕ ನಾಟಕ ಜರುಗಲಿದೆ.ಈ ಕಾರ್ಯಕ್ರಮದ ಸಾನಿಧ್ಯವನ್ನು ಜ್ಯೋತಿಷ್ಯ ರತ್ನ ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳು ವಹಿಸುವರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಜಯಪೂರ ಖ್ಯಾತ ನೇತ್ರ ತಜ್ಞ ವೈಧ್ಯರಾದ ಡಾ.ಪ್ರಭುಗೌಡ ಲಿಂಗದಳ್ಳಿ ಅವರು ವಹಿಸುವರು.

ಕಾರ್ಯಕ್ರಮದ ಉದ್ಘಾಟನೆಯನ್ನು ದೇವರ ಹಿಪ್ಪರಗಿ ಮತಕ್ಷೇತ್ರದ ಶಾಸಕ ಸೋಮನಗೌಡ ಪಾಟೀಲ(ಸಾಸನೂರ), ವಿಜಯಪೂರ ಶಿ.ಶ.ಹೇಮರಡ್ಡಿ ಮಲ್ಲಮ್ಮ ಸಹಕಾರಿ ಬ್ಯಾಂಕ್ ಅಧ್ಯಕ್ಷ ಬಸನಗೌಡ ಪಾಟೀಲ ಅವರು ನೆರವೇರಿಸುವರು.

ಮುಖ್ಯ ಅತಿಥಿಗಳಾಗಿ ಕೆಪಿಸಿಸಿ ಸದಸ್ಯ ಬಿ.ಎಸ್.ಪಾಟೀಲ(ಯಾಳಗಿ), ಜೆಡಿಎಸ್ ನಾಯಕ ರಾಜುಗೌಡ ಪಾಟೀಲ(ಕು.ಸಾಲವಾಡಗಿ), ಎಬಿಡಿ ಪೌಂಡೇಶನ್ ಅಧ್ಯಕ್ಷ ಆನಂದಗೌಡ ದೊಡಮನಿ, ಜಿಪಂ ಮಾಜಿ ಸದಸ್ಯ ಶಿವಾನಂದ ದೇಸಾಯಿ, ಶ್ರೀಮತಿ ಗೌರಮ್ಮ ಮುತ್ತತ್ತಿ, ಮಲ್ಲನಗೌಡ ಬಿರಾದಾರ ಮೊದಲಾದವರು ಆಗಮಿಸುವರು.ಕಾರಣ ಸುತ್ತಮುತ್ತಲಿನ ಗ್ರಾಮಗಳ ಸದ್ಭಕ್ತರು ಜಾತ್ರೋತ್ಸವದಲ್ಲಿ ಪಾಲ್ಗೊಂಡು ಶ್ರೀ ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ಜಾತ್ರೋತ್ಸವ ಕಮಿಟಿ ಪ್ರಕಟನೆ ಮೂಲಕ ತಿಳಿಸಿದೆ.

# ಅಸ್ಪೃಶ್ಯತಾ ನಿವಾರಣಾ ಅರಿವು ಕಾರ್ಯಕ್ರಮ

ಕೊಪ್ಪಳ :ತಾಲೂಕಿನ ಗುಳದಳ್ಳಿ ಗ್ರಾಮದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಅಸ್ಪೃಶ್ಯತಾ ನಿವಾರಣಾ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಫೆಬ್ರವರಿ 14 ರಂದು ನಡೆಯಿತು.



ಗ್ರಾಮ ಪಂಚಾಯತ್ ಅಧ್ಯಕ್ಷರಾದ ಗಂಗಮ್ಮ ಲಕ್ಷ್ಮಣ ಅವರು ಮಾತನಾಡಿ, ನಮ್ಮ ಗ್ರಾಮದಲ್ಲಿ ಎಲ್ಲರೂ ಅನ್ಯೋನ್ಯವಾಗಿ ಸಹಬಾಳ್ವೆಯಿಂದ ವಾಸಿಸುತ್ತಿದ್ದು, ಯಾವುದೇ ರೀತಿಯ ಅಸ್ಪೃಶ್ಯತಾ ಆಚರಣೆ ಇರುವುದಿಲ್ಲ ಎಂದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ನಾಗರತ್ನ ಅವರು ಮಾತನಾಡಿ, ಪಂಚಭೂತಗಳು ಯಾವಜಾತಿಗೂ ಸಂಬಂಧಿಸಿಲ್ಲ.

ಆದರೆ, ಮಾನವರಾಗಿ ನಮ್ಮಲ್ಲೇಕೆ ಈ ಜಾತಿ ಬೇದಭಾವ. ಎಲ್ಲರೂ ಒಂದಾಗಿರಬೇಕು ಮತ್ತು ಎಲ್ಲಾ ವರ್ಗದ ಜನರನ್ನು ಜೊತೆಗೆ ಕರೆದುಕೊಂಡು ಜೀವನ ಮಾಡಬೇಕೆಂದು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಮಂಜುಳಾ ಆರ್ ಅವರು ಮಾತನಾಡಿ, ಪ್ರಾಣಿಗಳಳಿಗೆ ವಿವೇಚನೆ ಇರುವುದಿಲ್ಲ. ಆದರೆ, ಬುದ್ಧಿವಂತಿಕೆಯುಳ್ಳ ಮನುಷ್ಯನಲ್ಲಿ ಜಾತಿ ಭಾವ ಇರುವುದು ನಿಜಕ್ಕೂ ಬೇಸರದ ಸಂಗತಿ ಎಂದರು. ಜನರು ಜಾತಿ ತಾರತಮ್ಯ ಮಾಡದೇ ಸಹಬಾಳ್ವೆಯಿಂದ ಜೀವನ ಸಾಗಿಸಬೇಕು ಎಂದು ಹೇಳಿದರು. ವಕೀಲರಾದ ಮಾರುತಿ ಚಾಮಲಾಪೂರ ಅವರು ಮಾತನಾಡಿ, ಯಾವುದೇ ಗ್ರಾಮದಲ್ಲಿ ಅಸ್ಪೃಶ್ಯತೆ ಕಂಡು ಬಂದರೆ ಅಸ್ಪೃಶ್ಯತಾ ನಿರ್ಮೂಲನಾ ಕಾಯ್ದೆ-1989ರಡಿ ಹಾಗೂ ತಿದ್ದುಪಡಿ ಕಾಯ್ದೆ (2015 & 2016) ರ ಪ್ರಕಾರ ಶಿಕ್ಷೆಗೆ ಗುರಿಪಡಿಸಬೇಕಾಗುವುದು.

# 2022-23ನೇ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಳನ

ಮೂಡಲಗಿ: 'ವಿದ್ಯಾರ್ಥಿಗಳು ಉತ್ತಮ ಹವ್ಯಾಸ ಮತ್ತು ಉತ್ತಮ ಜೀವನ ಶೈಲಿಯನ್ನು ರೂಢಿಸಿಕೊಂಡು ಶ್ರೇಷ್ಠ ವ್ಯಕ್ತಿಗಳಾಗಬೇಕು' ಎಂದು ಧಾರವಾಡದ ಸ್ಪರ್ಧಾ ಜೀನಿಯಸ್ ಕೆಎಎಸ್, ಪಿಎಸ್ಐ ತರಬೇತಿ ಸಂಸ್ಥೆಯ ಉಪನಿರ್ದೇಶಕ ಸಿದ್ದಣ್ಣ ದಳವಾಯಿ ಹೇಳಿದರು.

ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆಯ ಎಸ್ಎಸ್ಆರ್ ಪದವಿ ಪೂರ್ವ ಮಹಾವಿದ್ಯಾಲಯದ 2022-23ನೇ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಳನ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು ಮೊಬೈಲ್‌ವನ್ನು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಲು ಮತ್ತು ಜ್ಞಾನ ಗ್ರಹಿಸಿಲು ಮಾತ್ರ ಬಳಸಿಕೊಳ್ಳಬೇಕು ವಿನ: ಬದುಕನ್ನು ಹಾಳು ಮಾಡಿಕೊಳ್ಳಲಿಕ್ಕೆ




ಬಳಸಬಾರದು ಎಂದರು.

ಜೀವನದಲ್ಲಿ ಸಮಯ, ಅವಕಾಶಗಳು ಮತ್ತು ಅನುಭವಿಗಳ ಮಾರ್ಗದರ್ಶನವನ್ನು ಎಂದಿಗೂ ನಿರ್ಲಕ್ಷಿಸಬಾರದು. ಋಣಾತ್ಮಕವಾದ ಚಿಂತನೆಗಳನ್ನು ಬಿಟ್ಟು ಧನಾತ್ಮಕವಾದ ಚಿಂತನೆಗಳ ಮೂಲಕ ಯಶಸ್ಸಿಯತ್ತ ಸಾಗಬೇಕು. ಪಿಯುಸಿ ಹಂತದಲ್ಲಿ ವಿದ್ಯಾರ್ಥಿಗಳು ನಿತ್ಯ ದಿನಪತ್ರಿಕೆಗಳನ್ನು ಓದಿಕೊಂಡರೆ ಯಾವುದೇ ತರಬೇತಿ ಇಲ್ಲದೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಸುಲಭವಾಗಿ ಎದುರಿಸಬಹುದು. ವಿದ್ಯಾರ್ಥಿಗಳಲ್ಲಿ ಪುಸ್ತಕ ಮತ್ತು ಪತ್ರಿಕಗಳ ಓದುವ ರೂಢಿ ನಿರಂತರವಾಗಿರಬೇಕು ಎಂದರು.

ಅಧ್ಯಕ್ಷತೆವಹಿಸಿದ್ದ ಸಂಸ್ಥೆಯ ಅಧ್ಯಕ್ಷ ವಿಜಯಕುಮಾರ ಸೋನವಾಲಕರ ವಿವಿಧ ವಿಭಾಗಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಮತ್ತು ಸಾಧಕ ಶಿಕ್ಷಕರಿಗೆ ಸನ್ಮಾನವನ್ನು ಮಾಡಿದರು.

ನಿರ್ದೇಶಕ ವೆಂಕಟೇಶ ಟಿ. ಸೋನವಾಲಕರ ಮಾತನಾಡಿ ವಿದ್ಯಾರ್ಥಿನಿಯರು ಎಲ್ಲದರಲ್ಲೂ ಮೇಲುಗೈ ಸಾಧಿಸುತ್ತಿದ್ದು, ವಿದ್ಯಾರ್ಥಿಗಳು ಸಹ ಕಿಳರಿಮೆಯನ್ನು ಬಿಟ್ಟು ತಮ್ಮ ಪ್ರತಿಭೆಗಳನ್ನು ಅನಾವರಣಗೊಳಿಸಿಕೊಳ್ಳಬೇಕು ಎಂದರು.

ವೇದಿಕೆಯಲ್ಲಿ ಸಂಸ್ಥೆಯ ನಿರ್ದೇಶಕರಾರ ಪ್ರದೀಪ ಸೋನವಾಲಕರ, ಅನೀಲ ಸತರಡ್ಡಿ, ಪ್ರೊ. ಎಸ್.ಎಂ. ಕಮದಾಳ, ಉಪಪ್ರಾಚಾರ್ಯ ಕೆ.ಎಸ್. ಹೊಸಟ್ಟಿ, ಮುಖ್ಯ ಶಿಕ್ಷಕ ಬಿ.ಎಂ. ಬೋರಗಲ್, ವಿದ್ಯಾರ್ಥಿ ಒಕ್ಕೂಟದ ಅಧ್ಯಕ್ಷ ಎಂ.ಎಸ್. ಪಾಟೀಲ, ಸಾಂಸ್ಕೃತಿಕ ವಿಭಾಗ ಅಧ್ಯಕ್ಷ ಎಸ್.ಕೆ. ಹಿರೇಮಠ, ಕ್ರೀಡಾ ವಿಭಾಗ ಅಧ್ಯಕ್ಷ ಎಲ್.ಆರ್. ಧರ್ಮಟ್ಟಿ ಉಪಸ್ಥಿತರಿದ್ದರು.

ವರ್ಷದ ಉತ್ತಮ ವಿದ್ಯಾರ್ಥಿ, ವಿದ್ಯಾರ್ಥಿನಿ ಹಾಗೂ ಕ್ರೀಡಾ ವಿಭಾಗದ ವೀರಾಗ್ರ, ವೀರಾಗ್ರಣಿ ಪಶಸ್ತಿಗಳನ್ನು ನೀಡಿ ಗೌರವಿಸಿದರು.

ಪ್ರಾಚಾರ್ಯ ಪ್ರೊ. ಎಸ್.ಡಿ. ತಳವಾರ ಸ್ವಾಗತಿಸಿದರು, ಕೆ.ಕೆ. ಮರೆಪ್ಪಗೋಳ ವರದಿ ವಾಚನ ಮಾಡಿದರು, ಎಸ್.ವಿ.ಮೆಳವಂಕಿ ನಿರೂಪಿಸಿದರು, ಎಸ್.ಎಲ್.ಸಿಡ್ಲೆಪ್ಪಗೋಳ ವಂದಿಸಿದರು.

# ಅಸ್ವಾಭಾವಿಕ ಮರಣ: ಅವಲಂಬಿತರಿಗೆ ತಾತ್ಕಾಲಿಕ ಪರಿಹಾರಕ್ಕೆ ಪೂರಕ ದಾಖಲಾತಿ ಸಲ್ಲಿಸಲು ಸೂಚನೆ

ಬೆಳಗಾವಿ : ಕೇಂದ್ರ ಕಾರಾಗೃಹ ಬೆಳಗಾವಿಯಲ್ಲಿ ಅಸ್ವಾಭಾವಿಕ ಮರಣಹೊಂದಿರುವ ಬಂಧಿಯ ಕುಟುಂಬದ ಅವಲಂಬಿತರಿಗೆ ತಾತ್ಕಾಲಿಕ ಪರಿಹಾರ ಮೊತ್ತವನ್ನು ವಿತರಿಸುವ ಸಲುವಾಗಿ ಸಂತ್ರಸ್ತ ಬಂಧಿಯ ಅವಲಂಬಿತರು ಪೂರಕ ದಾಖಲೆಗಳೊಂದಿಗೆ ತಮ್ಮ ಕ್ಲೇಮುಗಳನ್ನು ಪ್ರಕಟಣೆಯ ದಿನದಿಂದ 3 ದಿನಗಳೊಳಗಾಗಿ, ಬೆಳಗಾವಿ ಕೇಂದ್ರ ಕಾರಾಗೃಹ ಮುಖ್ಯ ಅಧೀಕ್ಷಕರು ಇಲ್ಲಿಗೆ ಸಲ್ಲಿಸಲು ಸೂಚಿಸಲಾಗಿದೆ.

ಅಸ್ವಾಭಾವಿಕ ಮರಣಹೊಂದಿರುವ ಬಂಧಿಯ ವಿವರ : ಮಾಯಪ್ಪ ನಿಂಗಪ್ಪ ದನಗರ, ಕಟಕಬಾವಿ ಗ್ರಾಮ, ರಾಯಬಾಗ ತಾಲೂಕೂ, ಬೆಳಗಾವಿ ಜಿಲ್ಲೆ. ಪರಿಹಾರ ಮೊತ್ತ: 2,64,500 ರೂ ಹಾಗೂ ನಿಗಧಿ ಪಡಿಸದ ಅವಧಿ ಮೀರಿ ಸ್ವೀಕೃತವಾದ ಕ್ಲೇಮುಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳಗಾವಿಯ ರೈತ ಗ್ರಾಹಕರ ವಿದ್ಯುತ್ ಸಮಸ್ಯೆ ಪರಿಹಾರ ಸಭೆ

ಬೆಳಗಾವಿ : ಹೆಸ್ಕಾಂ ನಗರ ಉಪವಿಭಾಗ-3 ರ ನೆಹರೂ ನಗರ ಬೆಳಗಾವಿ ಕಛೇರಿಯಲ್ಲಿ ರೈತ ಗ್ರಾಹಕರ ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುಲು ಫೆ.17 ರಂದು ಬೆಳಿಗ್ಗೆ 10.30 ಗಂಟೆಗೆ ಸಭೆ ನಡೆಸಲಾಗುವುದು.

ರೈತ ಗ್ರಾಹಕರು ತಮ್ಮ ಸಮಸ್ಯೆ ಹಾಗೂ ಕುಂದು ಕೊರತೆಗಳ ಕುರಿತು ಸಭೆಯಲ್ಲಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಬೆಳಗಾವಿಯ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರಿಗೆ ಅದಾಲತ್ : ಫೆ.17 ರಂದು

ಬೆಳಗಾವಿ : ಪ್ರಾದೇಶಿಕ ಸಾರಿಗೆ ಕಚೇರಿಗೆ ಸಂಬಂಧಿಸಿದ ಸಾರ್ವಜನಿಕರ ಕುಂದು ಕೊರತೆ ಹಾಗೂ ಸಮಸ್ಯೆಗಳ ಬಗ್ಗೆ ಅವಹಾಲುಗಳನ್ನು ಸ್ವಿಕರಿಸಲಾಗುವುದು.

ಸದರಿ ಸಾರಿಗೆ ಅದಾಲತ್‌ನ್ನು ಫೆ. 17 2023 ರಂದು ಸಂಜೆ 4, ಗಂಟೆಗೆ ಚಿಕ್ಕೋಡಿ ಪ್ರಾದೇಶಿಕ ಸಾರಿಗೆ ಕಚೇರಿ ಆವರಣದಲ್ಲಿ ಹಮ್ಮಿಕೋಳ್ಳಲಾಗಿದೆ.

ಸಾರ್ವಜನಿಕರು ಸಾರಿಗೆ ಅದಾಲತ್‌ಗೆ ಹಾಜರಾಗಿ, ಈ ಕಚೇರಿಯಲ್ಲಿ ಅರ್ಜಿಗಳ ವಿಲೇವಾರಿಗಾಗಿ ಹಾಗೂ ಬಾಕಿ ಇದ್ದಲ್ಲಿ ಸೂಕ್ತ ದಾಖಲೆಗಳೊಂದಿಗೆ ತಮ್ಮ ಅರ್ಜಿಗಳನ್ನು ವಿಲೇವಾರಿಗೊಳಿಸಿಕೋಳ್ಳಬೇಕು ಎಂದು ಚಿಕ್ಕೋಡಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಹಕಾರ ಸಂಘಗಳಿಂದ ಮಾಹಿತಿ ಸಲ್ಲಿಸಲು ಸೂಚನೆ

ಬೆಳಗಾವಿ: ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ನಿಯಮ 1960 ರನ್ವಯ ಜ.1 2023 ರಿಂದ ಡಿ.31 2023 ರವರೆಗೆ ಆಡಳಿತ ಮಂಡಳಿಯ ಅವಧಿಯು ಮುಕ್ತಾಯವಾಗುವ ಸಹಕಾರ ಸಂಘಗಳ/ಸೌಹಾರ್ದ ಸಹಕಾರಿಗಳ ಮಾಹಿತಿಯನ್ನು ಸಹಕಾರ ಇಲಾಖೆಗೆ ನಿಗದಿತ ನಮೂನೆಯಲ್ಲಿ ಆರು ತಿಂಗಳು ಮುಂಚೆ ಮಾಹಿತಿ ಸಲ್ಲಿಸುವುದು ಅವಶ್ಯಕವಾಗಿರುತ್ತದೆ.

ಕಾರಣ ಬೆಳಗಾವಿ ಉಪವಿಭಾಗದಲ್ಲಿನ ಬೆಳಗಾವಿ, ಖಾನಾಪೂರ ಹಾಗೂ ಹುಕ್ಕೇರಿ ತಾಲೂಕಿನಲ್ಲಿರುವ ಸಹಕಾರ ಸಂಘಗಳ/ ಸೌಹಾರ್ದ ಸಹಕಾರಿಗಳ ಕಾರ್ಯದರ್ಶಿಗಳು ಆಡಳಿತ ಮಂಡಳಿ ಅವಧಿ ಮುಕ್ತಾಯವಾಗುವ 6 ತಿಂಗಳ ಮುಂಚಿತವಾಗಿ ಮಾಹಿತಿಯನ್ನು ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೆಳಗಾವಿ ಉಪವಿಭಾಗ, ಜಕ್ಕೇರಿಹೊಂಡ, ಗೋವಾವೇಶ ಹತ್ತಿರ ಬೆಳಗಾವಿ ಈ ಕಚೇರಿಗೆ ಸಲ್ಲಿಸಬೇಕು ಎಂದು ಬೆಳಗಾವಿ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನವ ಏಕತಾ ಶರ್ಮಸಭೆ ; ಲಕ್ಷ ದೀಪೋತ್ಸವ ಪುರಾಣ ಮಂಗಲ

ತಾಳಿಕೋಟೆ: ತಾಲೂಕಿನ ಪಡೇಕನೂರ ಗ್ರಾಮದ ಶ್ರೀ ದಾಸೋಹ ವಿರಕ್ತ ಮಠದ ಜಾತ್ರೋತ್ಸವ ಅಂಗವಾಗಿ ಮಾನವ ಏಕತಾ ಧರ್ಮ ಸಭೆ, ಲಕ್ಷ ದೀಪೋತ್ಸವ ಹಾಗೂ ಪುರಾಣ ಮಂಗಲ, ಮುತ್ತೈದೆ ಹೆಣ್ಣು ಮಕ್ಕಳಿಗೆ ಉಡಿ ತುಂಬುವ ಕಾರ್ಯಕ್ರಮವು ಇದೇ ದಿ. 18 ಶನಿವಾರರಂದು ಜರುಗಲಿದೆ.

ಶ್ರೀಮಠದ ಶ್ರೀ ಮ.ನಿ.ಪ್ರ. ಮಲ್ಲಿಕಾರ್ಜುನ ಮಹಾ ಸ್ವಾಮಿಗಳ ಅಪ್ಪಣೆಯ ಮೇರೆಗೆ ನಡೆಯಲಿರುವ ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಇಂಗಳೇಶ್ವರ ವಿರಕ್ತಮಠದ ಶ್ರೀ ಚನ್ನಬಸವ ಮಹಾಸ್ವಾಮಿಗಳು ವಹಿಸುವರು, ಸಾನಿಧ್ಯವನ್ನು ಮಸಬಿನಾಳ ದಾಸೋಹ ಸಂಸ್ಥಾನಮಠದ ಶ್ರೀ ಸಿದ್ದರಾಮ ಮಹಾಸ್ವಾಮಿಗಳು ವಹಿಸುವರು.

ನೇತೃತ್ವವನ್ನು ವಡವಡಗಿ ನಂದಿಮಠದ ಶ್ರೀ ವೀರಸಿದ್ಧ ಮಹಾಸ್ವಾಮಿಗಳು ವಹಿಸಲಿದ್ದು ಶಿವ ಸಮ್ಮುಖವನ್ನು ಪಡೇಕನೂರ ದಾಸೋಹ ವಿರಕ್ತಮಠದ ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಸಮ್ಮುಖವನ್ನು ರಾಜ್ಯ ಜ್ಯೋತಿಷ್ಯ ರತ್ನ ಪ್ರಶಸ್ತಿ ಪುರಸ್ಕೃತರಾದ ಚಬನೂರಿನ ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳು ವಹಿಸುವರು.

ಈ ಸಮಯದಲ್ಲಿ ಕಡಕೋಳ ಮಹಾಲಿಂಗೇಶ್ವರ ಹಿರೇಮಠದ ಶ್ರೀ ಮಹಾಲಿಂಗಯ್ಯ ಮಹಾಸ್ವಾಮಿಗಳು, ಲೋಟಗೇರಿ ಕಣ-ಕಾಲ ಮಠದ ಶ್ರೀ ಡಾ.ಗುರುಮೂರ್ತಿ ದೇವರು, ಶರಣಸೋಮನಾಳ ಹಿರೇಮಠದ ಶ್ರೀ ಮಹಾದೇವಯ್ಯ ಶಾಸ್ತ್ರೀಗಳು, ಆಲೂರಿನ ಶ್ರೀ ಸಂಗಯ್ಯ ಶಾಸ್ತ್ರೀಗಳು ಗಣಾಚಾರಿ, ಪುರಾಣಿಕರಾದ ಪೂಜ್ಯ ಮಾತೋಶ್ರೀ ಸಾವಿತ್ರಮ್ಮ ರೇವಣಸಿದ್ದೇಶ್ವರ ಮಠ, ಉಪಸ್ಥಿತರಿರುವರು.

ಕಾರ್ಯಕ್ರಮದ ಉದ್ಘಾಟನೆಯನ್ನು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಶಾಸಕ ಎ.ಎಸ್.ಪಾಟೀಲ (ನಡಹಳ್ಳಿ) ಅವರು ನೆರವೇರಿಸುವರು. ಅಧ್ಯಕ್ಷತೆಯನ್ನು ಮಾಜಿ ಶಾಸಕ ಸಿ.ಎಸ್.ನಾಡಗೌಡ(ಅಪ್ಪಾಜಿ) ಅವರು ವಹಿಸುವರು.

ಅತಿಥಿಗಳಾಗಿ ಬಿಜೆಪಿ ಜಿಲ್ಲಾ ಅಧ್ಯಕ್ಷ ಆರ್.ಎಸ್.ಪಾಟೀಲ (ಕೂಚಬಾಳ), ಜಿಪಂ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಕಾಂಗ್ರೇಸ್ ಮುಖಂಡ ಆನಂದಗೌಡ ದೊಡಮನಿ, ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಗುರು ತಾರನಾಳ, ಅನುಗ್ರಹ ಕಣ್ಣಿನ ಆಸ್ಪತ್ರೆಯ ನೇತ್ರ ತಜ್ಞ ವೈದ್ಯ ಡಾ.ಪ್ರಭುಗೌಡ ಲಿಂಗದಳ್ಳಿ, ಕೆಪಿಸಿಸಿ ಸದಸ್ಯ ಬಿ.ಎಸ್.ಪಾಟೀಲ(ಯಾಳಗಿ), ಅಸ್ಕಿ ಪೌಂಡೇಶನ್ ಅಧ್ಯಕ್ಷ ಸಿ.ಬಿ.ಅಸ್ಕಿ, ಎಸ್.ಎನ್.ಪಾಟೀಲ, ಸಿದ್ದನಗೌಡ ಬಿರಾದಾರ, ಎಂ.ಜಿ.ಪಾಟೀಲ, ಎಂ.ಎಸ್.ಸರಶೆಟ್ಟಿ, ಶಂಕರಗೌಡ ಲಿಂಗದಳ್ಳಿ, ಪಂಪನಗೌಡ ಜಾಲಿಕಟ್ಟಿ, ಸೋಮನಗೌಡ ಕೊಳೂರ, ಶ್ರೀಮತಿ ಬಸಮ್ಮ ಬನ್ನೆಟ್ಟಿ, ಬಸಪ್ಪ ನಾಯ್ಕೋಡಿ, ಶ್ರೀಮತಿ ಬಸಮ್ಮ ಮಾದರ, ಡಾ.ಸುನೀಲ ನ್ಯಾಯನೇಗಲಿ, ಡಾ.ಎಸ್.ಎಸ್.ಪಾಟೀಲ, ಡಾ.ಅರವಿಂದ ಕೊಲಕಾರ, ರಾಜು ಬ್ಯಾಕೋಡ, ಶರಣಬಸಪ್ಪ ಬ್ಯಾಕೋಡ, ಅವರು ಆಗಮಿಸುವರು.

ದಿ. 19 ರವಿವಾರರಂದು ಸಾಯಂಕಾಲ 6-30 ಗಂಟೆಗೆ ಮಹಾರಥೋತ್ಸವ ಜರುಗಲಿದೆ ಅಲ್ಲದೇ ಅಂದೇ ರಾತ್ರಿ 10 ಗಂಟೆಗೆ ಸಾಮಾಜಿಕ ನಾಟಕ ಜರುಗುವದೆಂದು ಶ್ರೀಮಠ ಪ್ರಕಟನೆ ಮೂಲಕ ತಿಳಿಸಿದೆ.

# ಕಾರಂಜಿ ಶ್ರೀ ಕನ್ನಡ ಭವನದಲ್ಲಿ ಸಿರಿ ಪುರಂದರ ನಾಟಕ ಪ್ರದರ್ಶನ

ಬೆಳಗಾವಿ : ಕನ್ನಡರಂಗಭೂಮಿಗೆ ಭವ್ಯವಾದ ಇತಿಹಾಸವಿದೆ. ಅದು ಕೇವಲ ಮನರಂಜನೆಗೆ ಮಾತ್ರ ಸೀಮಿತವಾಗದೆ ಜೀವನ ವಿವಿಧ ಆಯಾಮಗಳನ್ನು ಕಟ್ಟಿಕೊಡುವಲ್ಲಿ ಮಹತ್ವದ ಪಾತ್ರವಹಿಸಿದೆ ಎಂದು ಬೆಳಗಾವಿ ಕಾರಂಜಿಮಠದ ಪೂಜ್ಯ ಗುರುಸಿದ್ಧ ಮಹಾಸ್ವಾಮಿಗಳು ನುಡಿದರು. ಅವರು ಬೆಳಗಾವಿಯ ಕನ್ನಡ ಸಾಂಸ್ಕೃತಿಕ ಭವನದ ಕ್ಷೇಮಾಭಿವೃದ್ಧಿ ಸಂಘವುನೆಹರು ನಗರದಲ್ಲಿರುವ ಕನ್ನಡ ಸಾಂಸ್ಕೃತಿಕ ಭವನದಲ್ಲಿ ಪ್ರಪ್ರಥಮವಾಗಿ ಪ್ರದರ್ಶನಗೊಂಡ'ಸಿರಿ ಪುರಂದರ' ಕನ್ನಡ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿ ಆಶೀರ್ವದಿಸಿದರು.

ಇಂದು ಜನಮಾನಸದಿಂದ ದೂರಸರಿಯುತ್ತಿರುವ ರಂಗಭೂಮಿಯನ್ನು ಮತ್ತೊಮ್ಮೆ ಜೀವಂತ ಗೊಳಿಸುವ ಕಾರ್ಯ ನಡೆಯ ಬೇಕಾಗಿದೆ. ಒಂದುಕಾಲದಲ್ಲಿ ರಂಗಭೂಮಿ ಕಲಾವಿದರು ಊರೂರು ಸುತ್ತಾಡಿ ಅದ್ಭುತವಾದ ನಾಟಕವನ್ನು ನೀಡುತ್ತಿದ್ದರು.

ಇಂದು ಕಲಾವಿದರು ಸಹೃದಯರು ಒಂದೇ ಸೂರಿನಡಿ ಇದನ್ನು ಸವಿಯಲು ಸುಸಜ್ಜಿತವಾದ ರಂಗಮಂದಿರಗಳು ಸಿದ್ಧವಿದ್ದರೂ ಅದನ್ನು



ಸವಿಯುವ ಹೃದಯವಂತರ ಕೊರತೆ ಎದ್ದು ಕಾಣುತ್ತಿದೆ. ಕನ್ನಡರಂಗ ಭೂಮಿಯನ್ನು ಜೀವಂತ ಇಡುವುದು ಎಲ್ಲರ ಕರ್ತವ್ಯವಾಗಿದೆ. ಕನ್ನಡ ಸಾಂಸ್ಕೃತಿಕ ಭವನದ ರೂವಾರಿಗಳಾದ ಡಾ.ಪ್ರಭಾಕರ ಕೋರೆಯವರು ಅತ್ಯಂತ ಕಾಳಜಿಯಿಂದ ರಂಗಮಂದಿರವನ್ನು ರೂಪಿಸಿದ್ದಾರೆ. ಇಲ್ಲಿಜರುಗುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಎಲ್ಲರೂ ಪ್ರೋತ್ಸಾಹವನ್ನು ನೀಡಬೇಕೆಂದು ಕರೆನೀಡಿದರು.

ಸಿರಿ ಪುರಂದರಈ ನಾಟಕವನ್ನು ಕಲಬುರಗಿಯ ರಂಗಾಯಣ ತಂಡದವರು ಪ್ರಸ್ತುತ ಪಡಿಸಿದರು. ಶ್ರೀರಂಗರ ರಚನೆಯ ಈ ನಾಟಕದ ನಿರ್ದೇಶನ ಮಹಾದೇವ ಹಡಪದ ಹಾಗೂ ಸಂಗೀತ ರಾಮಚಂದ್ರ ಹಡಪದ ಅವರದಾಗಿತ್ತು.

ಸಾಹಿತಿಗಳಾದ ಡಾ.ಬಸವರಾಜ ಜಗಜಂಪಿ, ಬಿ.ಎಸ್.ಗವಿಮಠ, ಏಣಗಿ ಸುಭಾಷ, ಯ.ರು.ಪಾಟೀಲ, ಶಿವನಗೌಡ ಪಾಟೀಲ, ಸುಧೀರ ಕುಲಕರ್ಣಿ, ಡಾ.ಮಹೇಶ ಗುರನಗೌಡರ ಮೊದಲಾದವರು ಉಪಸ್ಥಿತರಿದ್ದರು.

## ಚಾಲಕನ ನಿಯಂತ್ರಣ ತಪ್ಪಿ ವಿದ್ಯುತ್ ಕಂಬಕ್ಕೆ ಸಿಲುಕಿದ ಕಾರು



ಧಾರವಾಡ : ಚಾಲಕನ ನಿಯಂತ್ರಣ ತಪ್ಪಿ ಕಾರೊಂದು ಪುಟ್ಪಾತ್ ಮೇಲೆ ಹತ್ತಿ ನಂತರ ದ ವಿದ್ಯುತ್ ಕಂಬಕ್ಕೆ ಹೋಗಿ ಸಿಲುಕಿಕೊಂಡಿರುವ ಘಟನೆ ನಗರದ ಎಸ್‌ಡಿಎಂ ಬಳಿನಡೆದಿದೆ.

ಎಸ್‌ಡಿಎಂ ಆಸ್ಪತ್ರೆ ಎದುರಿಗೆ ಈ ಘಟನೆ ನಡೆದಿದ್ದು, ಒಂದು ಕ್ಷಣ ಎಲ್ಲರೂ ಬೆಚ್ಚಿಬಿದ್ದಿದ್ದು, ಈ ದುರ್ಘಟನೆಯಲ್ಲಿ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಘಟನಾ ಸ್ಥಳಕ್ಕೆ ಸ್ಥಳೀಯರ ಪೊಲೀಸರು ದೌಡಾಯಿಸಿ ಪರಿಶೀಲನೆ ನಡೆಸುತ್ತಿದ್ದಾರೆ. ಇನ್ನು ಅಪಘಾತದಿಂದ ಕಾರಿಗೆ ಹಾನಿಯಾಗಿದೆ.

## ಕರ್ನಾಟಕ ವಿಧಾನಸಭೆ ಚುನಾವಣೆ–2023: ಚುನಾವಣಾ ಪ್ರಚಾರ ಸಾಮಗ್ರಿಗಳ ದರ ನಿಗದಿ

ಬೆಳಗಾವಿ: ಮುಂಬರುವ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ಚುನಾವಣಾ ಪ್ರಚಾರಕ್ಕಾಗಿ ಬಳಸಲಾಗುವ ವಿವಿಧ ಸಾಮಗ್ರಿಗಳ ದರಗಳನ್ನು ನಿಗದಿಪಡಿಸಿ ಚುನಾವಣಾ ಆಯೋಗ–ಕ್ಕೆ ಕಳಿಸಲಾಗುತ್ತದೆ. ನೀತಿಸಂಹಿತೆ ಜಾರಿಯಲ್ಲಿರುವಾಗ ಕೈಗೊಳ್ಳಲಾಗುವ ಪ್ರಚಾರದ ವೆಚ್ಚವನ್ನು ಈ ದರಗಳ ಆಧಾರದ ಮೇಲೆಯೇ ಲೆಕ್ಕ ಹಾಕಲಾಗುತ್ತದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ವಿಧಾನಸಭಾ ಚುನಾವಣಾ –2023 ರ ಪ್ರಚಾರ ಸಾಮಗ್ರಿಗಳ ದರ ನಿಗದಿ ಕುರಿತು ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಗುರುವಾರ(ಫೆ.16) ನಡೆದ ಅಧಿಕಾರಿಗಳ



ಮತ್ತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಒಂದು ವೇಳೆ ಕೆಲ ಸಾಮಗ್ರಿಗಳ ದರಗಳು ಅಥವಾ ವೆಚ್ಚವು ನಿಗದಿತ ದರಕ್ಕಿಂತ ಕಡಿಮೆ ಇದ್ದರೆ ಸಂಬಂಧಿಸಿದವರು ನಿಯಮಾನುಸಾರ ಸಲ್ಲಿಸುವ ರಶೀದಿಯನ್ನು ಕೂಡ ಪರಿಗಣಿಸಲು ಅವಕಾಶಗಳಿರುತ್ತವೆ ಎಂದು ಸ್ಪಷ್ಟಪಡಿಸಿದರು.

ನೀತಿಸಂಹಿತೆ ಜಾರಿಯಲ್ಲಿರುವ ವೇಳೆ ಪ್ರಚಾರಕ್ಕಾಗಿ ಬಳಸಬಹುದಾದ ಪ್ರತಿಯೊಂದು ಸಾಮಗ್ರಿಗಳನ್ನು ಪಟ್ಟಿ ಮಾಡಿ ಚುನಾವಣಾ ಆಯೋಗದ ನಿರ್ದೇಶನದಂತೆ ಮಾರುಕಟ್ಟೆ ದರ ನಿಗದಿಪಡಿಸಲಾಗಿರುತ್ತದೆ. ಪ್ರಚಾರ ಸಂದರ್ಭದಲ್ಲಿ ಇವುಗಳನ್ನು ಬಳಕೆ ಮಾಡಿದಾಗ ಮಾತ್ರ ಚುನಾವಣಾ ವೆಚ್ಚದಲ್ಲಿ ಸೇರ್ಪಡೆ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಜತೆ ಚರ್ಚೆಯ ಬಳಿಕ ಮಾರುಕಟ್ಟೆಯಲ್ಲಿ ಲಭ್ಯವಿರುವ ದರಗಳು ಹಾಗೂ ಗುಣಮಟ್ಟ ಆಧರಿಸಿ ಕೆಲವು ಸಾಮಗ್ರಿಗಳ ದರಗಳನ್ನು ಕಡಿಮೆ ಮಾಡಲು ಸಭೆಯಲ್ಲಿ ಒಮ್ಮತದಿಂದ ನಿರ್ಧರಿಸಲಾಯಿತು.

ಮಹಾನಗರ ಪಾಲಿಕೆಯ ಆಯುಕ್ತರಾದ ಡಾ.ರುದ್ರೇಶ್ ಘಾಳಿ, ಜಿಲ್ಲಾ ಪಂಚಾಯತ ಮುಖ್ಯ ಲೆಕ್ಕಾಧಿಕಾರಿ ಹಾಗೂ ಚುನಾವಣಾ ವೆಚ್ಚದ ನೋಡಲ್ ಅಧಿಕಾರಿ ಪರಶುರಾಮ್ ದುಡಗುಂಟಿ, ಆಹಾರ ಮತ್ತು ನಾಗರಿಕರ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀಶೈಲ ಕಂಕಣವಾಡಿ, ಜಿಲ್ಲಾ ನಗರಾಭಿವೃದ್ಧಿ ಯೋಜನಾ ಕೋಶದ ಯೋಜನಾ ನಿರ್ದೇಶಕ ಈಶ್ವರ ಉಳ್ಳಾಗಡ್ಡಿ, ಚುನಾವಣಾ ಶಾಖೆಯ ತಹಶಿಲ್ದಾರ ಸಾರಿಕಾ ಶೆಟ್ಟಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಮಾನ್ಯತೆ ಪಡೆದ ರಾಷ್ಟ್ರೀಯ ಪಕ್ಷಗಳು ಮತ್ತು ನೋಂದಾಯಿತ ಪಕ್ಷಗಳ ಪ್ರತಿನಿಧಿಗಳು ಸಭೆಯಲ್ಲಿ ಪಾಲ್ಗೊಂಡು ದರ ನಿಗದಿ ಕುರಿತು ವಿಸ್ತೃತ ಚರ್ಚೆ ನಡೆಸಿ, ದರ ನಿಗದಿಪಡಿಸಿದರು.

## ಆನೆಕಾಲು ರೋಗ ಔಷಧ ಸೇವನೆ ಕುರಿತು ತಪಾಸಣೆ

ತಾಳಿಕೋಟೆ: ಆನೆಕಾಲು ರೋಗ ನಿವಾರಣೆಗಾಗಿ ಹೆಚ್ಚುವರಿ ಸುತ್ತಿನ ಸಾಮೂಹಿಕ ಔಷಧ ಸೇವನೆಯ ಎಮ್.ಡಿ.ಎ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರ ಕುರಿತು ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಯವರೊಂದಿಗೆ ರಾಜವಾಡೆ ಬಡಾವಣೆಗೆ ಆಗಮಿಸಿದ ಬೆಂಗಳೂರಿನ ಸಿಂತಲ್ ಕುಮಾರ ಆರ್.ಒ.ಎಚ ಅವರು ಮನೆ ಮನೆಗೆ ತೆರಳಿ ಮನೆಯವರೊಂದಿಗೆ ಸಂಪರ್ಕಿಸಿ ವಿಚಾರಣೆ ನಡೆಸಿದರಲ್ಲದೆ ಸಮರ್ಪಕ ಉತ್ತರವನ್ನು ಆಲಿಸಿದ ಅವರು ತಮ್ಮಇಲಾಖಾ ಸಿಬ್ಬಂದಿಯೊಂದಿಗೆ ಪ್ರತಿ ಮನೆಗೆ ಬೇಟಿ ನೀಡಿ ವಿಚಾರಿಸಿದರು.

ತಾಳಿಕೋಟೆ ಪಟ್ಟಣ ಹಾಗೂ ಅದರ ವ್ಯಾಪ್ತಿಯಲ್ಲಿ ಬರುವ ಬಂಟನೂರ, ಕೊಣ್ಣೂರ, ಕಾರಿಗನೂರ, ಮಡಿಕೇಶ್ವರ, ತಮದಡ್ಡಿ ವ್ಯಾಪ್ತಿಯ ಗ್ರಾಮಗಳಲ್ಲಿ ಫೇ.10 ರಿಂದ 28ರವರೆಗೆ ಹಮ್ಮಿಕೊಂಡ ಕಾರ್ಯಕ್ರಮ ಕುರಿತು ವಿಚಾರಿಸಿದರಲ್ಲದೆ ವ್ಯವಸ್ಥಿತವಾಗಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವಂತೆ ಸೂಚಿಸಿದರು.

ತಾಲೂಕಿನ ಎಲ್ಲಾ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಡಿಇಸಿ ಮತ್ತು ಅಲ್ಬಂಡೊಜಲ್ ಮಾತ್ರೆಗಳನ್ನು ನುಂಗಿಸಲಾಗುತ್ತಿದ್ದರ ಕುರಿತು ಹಾಗೂ 16ನೇ ತಾರಿಖಿನಿಂದ ತಾಳಿಕೋಟೆ ತಾಲೂಕಿನಾದ್ಯಂತ ಆಶಾಕಾರ್ಯಕರ್ತೆಯರು ಹಾಗೂ ಅಂಗನವಾಡಿ ಕಾರ್ಯಕರ್ತೆಯರು



ಕಾರ್ಯಪ್ರವೃತ್ತರಾಗಿ ಮನೆಮನೆಗೆ ಬೇಟಿ ನೀಡಿ ಮಾತ್ರೆಗಳನ್ನು ನುಂಗಿಸಿದ್ದರ ಕುರಿತು ಹಾಗೂ ಫೇ.28ರವರೆಗೆ ಈ ಕಾರ್ಯ ಯಶಸ್ವಿಗೊಳಿಸುವಂತೆ ಸೂಚಿಸಿದರು.

ಈ ಸಮಯದಲ್ಲಿ ಸಂಜಯ್ ಸಜ್ಜನ ಎಂ.ಟಿ.ಎಸ್.ಬಾಗೆವಾಡಿ, ಶಿವಯೋಗಿ ಮಠ ಸಿನಿಯರ್ ಎಚ್.ಆಯ್.ಒ, ಎಫ್.ಎ.ಅತ್ತಾರ ಜೂನಿಯರ್ ಎಚ್.ಆಯ್.ಒ, ಶ್ರೀಮತಿ ಎಮ್.ಎಸ್.ಟಕ್ಕಳಕಿ ಪಿ.ಎಚ್.ಸಿ.ಒ, ಆಶಾಕಾರ್ಯಕರ್ತೆಯರಾದ ಇಂದಿರಾಬಾಯಿ ಕದಂ, ವಿಜಯಲಕ್ಷ್ಮಿಲಾವರಕರ ಪಾಲ್ಗೊಂಡಿದ್ದರು.

## ಕಿರು ಚಿತ್ರ ಮೂಲಕ ಜಲ ಜೀವನ್ ಮಿಷನ್ ಯೋಜನೆ

ಬೆಳಗಾವಿ : ಜಲಜೀವನ್ ಮಿಷನ್ ಯೋಜನೆಯ ಕುರಿತಾದ ಕಿರು ಚಿತ್ರ ಪ್ರದರ್ಶನ ಮಾಡಿ ಸಮುದಾಯದ ಜನರಿಗೆ ಜಲ ಸಂರಕ್ಷಣೆ, ನೀರಿನ ಪ್ರಜ್ಞಾವಂತ ಬಳಕೆ ಮತ್ತು ಹಸಿರೀಕರಣ, ಸಮುದಾಯ ವಂತಿಗೆ ಜಲಜೀವನ್ ಮಿಷನ್ ಯೋಜನೆ ಕುರಿತು ಅರಿವು ಮೂಡಿಸಲಾಗುತ್ತಿದೆ ಎಂದು ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಶಶಿಕಾಂತ ನಾಯಕ ಅವರು ತಿಳಿಸಿದರು.

ಜಲಜೀವನ್ ಮಿಷನ್ ಯೋಜನೆಯಡಿ ಗುರುವಾರ (ಫೆ.16) ನಡೆದ ಜಿಲ್ಲಾ ಪಂಚಾಯತಿ ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ವಿಭಾಗ, ಗ್ರಾಮೀಣ ಮತ್ತು ನಗರಾಭಿವೃದ್ಧಿ ಸಂಸ್ಥೆ ಹಮ್ಮಿಕೊಂಡ ಆರೋಗ್ಯ ಮತ್ತು ನೈರ್ಮಲ್ಯ ಕುರಿತು ಶಾಲಾ ಮಕ್ಕಳಿಗೆ ಹಾಗೂ ಸಮುದಾಯಕ್ಕೆ ಕಿರು ಚಿತ್ರ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲ ಕುಟುಂಬಗಳಿಗೆ ಕಾರ್ಯಾತ್ಮಕ ನಳ ಸಂಪರ್ಕವನ್ನು ಕಲ್ಪಿಸಲಾಗುತ್ತಿದೆ. ಅನುಷ್ಠಾನವಾಗುವ ಗ್ರಾಮಗಳಲ್ಲಿ ಸಮುದಾಯ ಈ ಯೋಜನೆಯಲ್ಲಿ 10% ವಂತಿಗೆ ನೀಡಬೇಕು. ಕೇಂದ ರಾಜ್ಯ ಸರಕಾರಗಳು 90% ಹಣ ವಿನಿಯೋಗಿಸುತ್ತಿವೆ.



ಹೀಗಾಗಿ ಜನರಲ್ಲಿ ನೀರಿನ ಉಪಯೋಗ ಮತ್ತು ಗೃಹ ಬಳಕೆಯಲ್ಲಿ ಉತ್ಪತ್ತಿಯಾದ ಕಚ್ಚಾ ನೀರನ್ನು ಪುನರ್ ಬಳಕೆ ಮಾಡುವ ವಿಧಾನ ಹಾಗೂ ಉತ್ತಮ ನೈರ್ಮಲ್ಯ ಅಭ್ಯಾಸಗಳ ಕುರಿತು ಜನರಲ್ಲಿ ವ್ಯಾಪಕವಾದ ಅರಿವು ಮೂಡಿಸಲಾಗುತ್ತಿದೆ ಎಂದರು

ಜಿಲ್ಲಾ ಯೋಜನಾ ಜಲ ಜೀವನ ಮಿಷನ್ ವ್ಯವಸ್ಥಾಪಕರಾದ ನೀಲಮ್ಮ ಕಮತೆ ಅವರು ಮಾತನಾಡಿ ಜಲ ಜೀವನ್ ಮೀಷನ್ ಯೋಜನೆ ಸರಕಾರದ ಒಂದು ಮಹತ್ವಕಾಂಕ್ಷಿ ಯೋಜನೆಯಾಗಿದ್ದು ಇದರ ಯಶಸ್ವಿಗೆ ಎಲ್ಲರ ಸಹಕಾರ ಅಗತ್ಯ ಈ ಕಿರು ಚಿತ್ರದಿಂದ ಜನರಿಗೆ ಯೋಜನೆಯ ಕುರಿತು ಮಾಹಿತಿ ನೀಡಲಿದ್ದಾರೆ ಹಾಗು ಬೆಳಗಾವಿ ವಿಭಾಗದ 144 ಯೋಜನಾ ಅನುಷ್ಠಾನ ಹಳ್ಳಿಗಳಲ್ಲಿ ಮಾಹಿತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

## ಅಪಘಾತ; ಒಂದೇ ಕಾರಿನಲ್ಲಿದ್ದ ನಾಲ್ವರ ಸಾವು



ಕೊಪ್ಪಳ: ಕುಕನೂರು ತಾಲೂಕಿನ ಬನ್ನಿಕೊಪ್ಪ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಸ್ಥಳದಲ್ಲಿಯೇ ನಾಲ್ವರು ಮೃತಪಟ್ಟಿದ್ದಾರೆ.

ಹೆದ್ದಾರಿಯಲ್ಲಿರುವ ಬ್ರಿಡ್ಜ್‌ನ್ ಗೋಡೆಗೆ ವೇಗವಾಗಿ ಬಂದ ಕಾರು ಗುದ್ದಿದೆ. ಕಾರಿನಲ್ಲಿದ್ದ ಇಬ್ಬರು ಮಹಿಳೆಯರು ಹಾಗೂ ಇಬ್ಬರು ಪುರುಷರು ಮೃತಪಟ್ಟಿದ್ದಾರೆ. ಇವರೆಲ್ಲರೂ ಹೈದ್ರಾಬಾದ್ ಮೂಲದವರು ಎಂದು ಗೊತ್ತಾಗಿದೆ.

ಕೊಪ್ಪಳ ಮಾರ್ಗವಾಗಿ ಗದಗ ಕಡೆಗೆ ಇವರು ಕಾರಿನಲ್ಲಿ ತೆರುಳುತ್ತಿದ್ದರು ಎನ್ನಲಾಗಿದೆ. ಮೃತಪಟ್ಟವರ ಹೆಸರು ಹಾಗೂ ವಿಳಾಸಕ್ಕಾಗಿ ಪೊಲೀಸರು ಶೋಧ ನಡೆಸುತ್ತಿದ್ದಾರೆ. ಕುಕನೂರು ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ಮುಂದಿನ ತನಿಖೆ ಕೈಗೊಂಡಿರುವ ಪೊಲೀಸರು ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ.

ವೇಗವಾಗಿದ್ದ ಕಾರು ಸೇತುವೆಯ ಗೋಡೆಗೆ ಡಿಕ್ಕಿ ಹೊಡೆದಿದೆ. ಹೀಗಾಗಿ ಚಾಲಕನಿಗೆ ನಿದ್ರೆ ಮಂಪರು ಬಂದಿತ್ತೇ? ಇಲ್ಲವೇ ಯಾವುದಾದರೂ ವಾಹನಕ್ಕೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಹೋಗಿ ಅಪಘಾತ ಸಂಭವಿಸಿದೆಯೇ ಎಂಬ ನಿಟ್ಟಿನಲ್ಲಿ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಕೇಂದ್ರ ಕಾರಾಗೃಹದಲ್ಲಿ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ 2023 ಕಾರ್ಯಕ್ರಮ ಆಯೋಜನೆ

ಬೆಳಗಾವಿ: ಕೇಂದ್ರ ಕಾರಾಗೃಹದಲ್ಲಿ "ಸ್ಪರ್ಶ ಕುಷ್ಟರೋಗ ಜಾಗೃತಿ ಅಭಿಯಾನ 2023 ನಿಮಿತ್ತ ಕಾರ್ಯಕ್ರಮ ಆಯೋಜಿಸಲಾಗಿತ್ತು. ಸದರಿ ಕಾರ್ಯಕ್ರಮವು ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿಗಳ ಕಾರ್ಯಾಲಯ ಬೆಳಗಾವಿ ಹಾಗೂ ಕೇಂದ್ರ ಕಾರಾಗೃಹ ಬೆಳಗಾವಿ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿತ್ತು.

ಸಸಿಗೆ ನಿರೂನಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಮುಖ್ಯ ಅಧೀಕ್ಷಕರಾದ ಶ್ರೀ ಕೃಷ್ಣ ಕುಮಾರ ಮಾತನಾಡಿ ಖೈದಿಗಳು ಮಾನಸಿಕವಾಗಿ ದೈಹಿಕವಾಗಿ ಸಧೃಡರಾಗಿರಲು ವಿವಿಧ ಆರೋಗ್ಯ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಅದರಲ್ಲಿ ಕುಷ್ಟರೋಗ ಜಾಗೃತಿ ಕಾರ್ಯಕ್ರಮವು ಒಂದು. ಈ ರೋಗವು ನಿಧಾನವಾಗಿ ಹರಡುತ್ತದೆ. ಕುಷ್ಠರೋಗ ಲಕ್ಷಣಗಳು




ಕಂಡು ಬಂದಾಗ ಸೂಕ್ತ ಚಿಕಿತ್ಸೆ ಪಡೆದರೆ ಅದರಿಂದ ಗುಣಮುಖರಾಗಬಹುದು ಈ ಕಾರಾಗೃಹದ ಸುಮಾರು 900 ಖೈದಿಗಳು ಇದ್ದು ಯಾರಿಗಾದರೂ ಕುಷ್ಠರೋಗದ ಲಕ್ಷಣಗಳು ಕಂಡು ಬಂದಲ್ಲಿ ಯಾವುದೇ ಅಸಡ್ಯೆ ಹಿಂಜರಿಕೆ ತೋರದೆ ಕಾರಾಗೃಹದ ವೈದ್ಯಾಧಿಕಾರಿಗಳನ್ನು ಸಂಪರ್ಕಿಸಿ ಸೂಕ್ತ ಚಿಕಿತ್ಸೆ ಪಡೆಯಬೇಕು ಹಾಗೂ ಈ ಕಾರಾಗೃಹದಲ್ಲಿ ಆಯೋಜಿಸಲಾಗುವ ಎಲ್ಲ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರೂ ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿಗಳಾದ ಡಾ॥ ಚಾಂದನಿ ದೇವಡಿ ಮಾತನಾಡಿ ಕುಷ್ಠರೋಗವು ಪುರಾತನ ಕಾಲದಿಂದಲೂ ಇದೆ. ಈ ರೋಗವು ದೇವರ ಶಾಪದಿಂದ ಹಾಗೂ ಪಾಪ ಕರ್ಮಗಳಿಂದ ಬರುತ್ತದೆ ಎಂಬ ಮೂಢ ನಂಬಿಕೆ ಇತ್ತು. 1985 ರಲ್ಲಿ ಈ ರೋಗಕ್ಕೆ ಔಷಧಿಯನ್ನು ಕಂಡು ಹಿಡಿಯಲಾಯಿತು.

ಹಾಗೂ ಸರ್ಕಾರ ನಿರಂತರ ಜಾಗೃತಿ ಮೂಡಿಸುವ ಮೂಲಕ ಈ ರೋಗದ ಪ್ರಮಾಣ ಕಡಿಮೆ ಆಗತೊಡಗಿತು ಜಗತ್ತಿನ ಶೇಕಡಾ 100 ರೋಗಿಗಳಲ್ಲಿ 60 ಶೇ. ಭಾರತೀಯರು ಈ ರೋಗದಿಂದ ಬಳಲುತ್ತಿದ್ದಾರೆ. ಕುಷ್ಠರೋಗಿಗಳಿಗೆ ಸರ್ಕಾರದಿಂದ ಅನೇಕ ಸೌಲಭ್ಯಗಳು ಇರುತ್ತದೆ ಭಾರತ ದೇಶದಿಂದ ಕುಷ್ಠರೋಗವು ಸಂಪೂರ್ಣವಾಗಿ ಮುಕ್ತವಾಗಿರಿಸಲು ಮಹಾತ್ಮ ಗಾಂಧಿಜಿಯವರ ಪುಣ್ಯದಿನವಾದ ಜನೆವರಿ 30 ರಿಂದ ಪೆಬ್ರುವರಿ 13 ರ ವರೆಗೆ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ 2023 ಆಯೋಜಿಸಲಾಗಿದೆ ಎಂದು ಹೇಳಿದರು ಹಾಗೂ ಈ ರೋಗದ ಬಗ್ಗೆ ಮಾಹಿತಿ ಪಡೆದು ಬಿಡುಗಡೆ ನಂತರ ಸಮಾಜದಲ್ಲಿ ತಮ್ಮ ಕುಂಟುಂಬಸ್ಥರಿಗೆ ಹಾಗೂ ಇತರರಿಗೆ ಈ ರೋಗದ ಬಗ್ಗೆ ಅರಿವು ಮೂಡಿಸಬೇಕು ಎಂದು ಹೇಳಿದರು.

ಕಾರಾಗೃಹದ ಮುಖ್ಯ ವೈದ್ಯಾಧಿಕಾರಿ ಡಾ॥ ಮಹೇಶ ನಾಗರಬೆಟ್ಟ ಮಾತನಾಡಿ ಆರೋಗ್ಯವೇ ಬಾಗ್ಯ ಎಂಬ ನಾಣ್ಣುಡಿಯಂತೆ ಇಂದಿನ ಆದುನಿಕ ಯುಗದಲ್ಲಿ ಪ್ರತಿಯೊಬ್ಬರು ಒತ್ತಡದಿಂದ ಬಳಲುತ್ತಿದ್ದು, ಕಾರಣ ಈ ಕಾರಾಗೃಹದಲ್ಲಿ ಆಯೋಜಿಸಲಾಗುವ ವಿವಿದ ಕಾರ್ಯಕ್ರಮಗಳಲ್ಲಿ ಬಾಗವಹಿಸಿ ಮಾಹಿತಿ ಪಡೆದು ಆರೋಗ್ಯವಂತರಾಗಿ ಬಾಳಿರಿ ಎಂದು ಹೇಳಿದರು.

ವೇದಿಕೆಯಲ್ಲಿ ಡಾ॥ ಮಹೇಶ ನಾಗರಬೆಟ್ಟ, ಸಹಾಯಕ ಅಧೀಕ್ಷಕ ಶ್ರೀ ಶಹಾಬುದ್ದಿನ ಕೇ, ಜೈಲರ್ ಶ್ರೀ ರಾಜೇಶ ಧರ್ಮಟ್ಟಿ, ಶ್ರೀ ಮಾರಿಹಾಳ ಶ್ರೀ ಕಲಿಮುಲ್ಲಾ, ಶ್ರೀಮತಿ ಸಹನಾ ಹಾಗೂ ಶ್ರೀಮತಿ ರಾಜೇಶ್ವರಿ ಉಪಸ್ಥಿತರಿದ್ದರೂ. ಕಾರಾಗೃಹದ ಉಪಾಧ್ಯಾಯರಾದ ಶ್ರೀ ಶಶಿಕಾಂತ ಯಾದಗುಡೆ ಕಾರ್ಯಕ್ರಮ ನಿರೂಪಿಸಿ ವಂದಿಸಿದರೂ.

## ಮಹಾಶಿವರಾತ್ರಿ: ಫೆ.18 ರಂದು ಮಾಂಸ ಮಾರಟ ನಿಷೇದ

ಬೆಳಗಾವಿ : ಮಹಾಶಿವರಾತ್ರಿ ನಿಮಿತ್ತ ಬೆಳಗಾವಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಎಲ್ಲ ಕಸಾಯಿಖಾನೆ/ ಮಾಂಸಾಹಾರಿ ಅಂಗಡಿಗಳನ್ನು ಶನಿವಾರ ಫೆ. 18–2023 ರಂದು ಬಂದ್ ಮಾಡುವಂತೆ ಸೂಚಿಸಲಾಗಿರುತ್ತದೆ.

ಕಸಾಯಿಖಾನೆ/ಮಾಂಸಾಹಾರಿ ಅಂಗಡಿಗಳ ಮಾಲೀಕರುಗಳು ಮಹಾಶಿವರಾತ್ರಿ ನಿಮಿತ್ತ ತಮ್ಮ ಅಂಗಡಿಗಳನ್ನು ಬಂದು ಮಾಡಿ ಸಹಕರಿಸಬೇಕು,

ಈ ದಿನದಂದು ಕಸಾಯಿಖಾನೆ/ಮಾಂಸಾಹಾರಿ ಅಂಗಡಿ ಮಾಲೀಕರು ಉಲ್ಲಂಘನೆ ಮಾಡಿರುವದು ಕಂಡು ಬಂದರೆ ಅಂತಹ ಅಂಗಡಿ ಮಾಲೀಕರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತರಾದ ರುದ್ರೇಶ್ ಘಾಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರಿಚಿತ ವ್ಯಕ್ತಿ ಮೃತದೇಹ ಪತ್ತೆ

ಬೆಳಗಾವಿ : ಬೆಳಗಾವಿ ನಗರದ ಶಹಾಪೂರ ಪೊಲೀಸ್ ಠಾಣೆ (ಓಲ್ಡ್ ಪಿಬಿ ರೋಡ) ವ್ಯಾಪ್ತಿಯಲ್ಲಿ ಫೆ 15, 2023 ರಂದು (ಅಂದಾಜು 60– 65 ವರ್ಷ) ಅಪರಿಚಿತ ವ್ಯಕ್ತಿಯ ಮೃತದೇಹ ಪತ್ತೆಯಾಗಿದೆ.

ಮಖಾನ ದರ್ಗಾ ಹತ್ತಿರ ಅಪರಚಿತ ವ್ಯಕ್ತಿ ಮೃತದೇಹ ದೊರಕಿದ್ದು, ಮೃತನ ಶವವನ್ನು ಬೆಳಗಾವಿ, ಬಿಮ್ಸ್ ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದೆ.

**ಮೃತ ವ್ಯಕ್ತಿಯ ಚಹರೆ ವಿವರ:**

ಅಂದಾಜು 5 ಪೂಟ 4 ಇಂಚ, ಕೋಲು ಮುಖ, ನೆಟ್ಟನೆಮೂಗು, ಸಾದಾರನ ಮೈಕಟ್ಟು, ಗೋದಿಗೆಂಪು ಮೈಬಣ್ಣ, ಕೃತಕ ಹಲ್ಲು, ಉದ್ದ ತೋಳಿನ ಶರ್ಟ, ಬೂದು ಬಣ್ಣದ ಪ್ಯಾಂಟ್, ಬಿಳಿ ಬಣ್ಣದ ಬನಿಯನ್ ಧರಿಸಿರುತ್ತಾನೆ.

ಈ ರೀತಿ ಚಹರೆಯುಳ್ಳ ಮೃತ ವ್ಯಕ್ತಿಯ ವಾರಸುದಾರರು ಇದ್ದಲ್ಲಿ ಬೆಳಗಾವಿ ನಗರ ಪೊಲೀಸ್ ಕಂಟ್ರೋಲ್ ರೂಮ್ 0831–2405233, ಶಹಾಪೂರ ಪೊಲೀಸ ಠಾಣೆ, ದೂರವಾಣಿ ಸಂ–0831–2405244.ಪಿ.ಐ, ಶಹಾಪೂರ ಮೊ.ನಂ; 9480804046, ಪಿಎಸ್ಐ, ಶಹಾಪೂರ ಮೊ.ನಂ:9480804104 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಶಹಾಪೂರ ಪೊಲೀಸ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂತ ಸೇವಾಲಾಲರವರ 284ನೇ ಜಯಂತಿಯ ದಿನಾಚರಣೆ



ಮೂಡಲಗಿ: ಅರಭಾವಿ ಕಿತ್ತೂರು ರಾಣಿ ಚನ್ನಮ್ಮ ತೋಟಗಾರಿಕೆ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಶ್ರೀ ಸಂತ ಸೇವಾಲಾಲ ರವರ 284ನೇ ಜಯಂತಿಯ ದಿನಾಚರಣೆಯನ್ನು ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಮಹಾವಿದ್ಯಾಲಯದ ಡೀನ್ ಶ್ರೀಮತಿ ಬಿ.ಸಿ. ಪಾಟೀಲ ಮಾತನಾಡಿ, ಲೋಕಕಲ್ಯಾಣಕ್ಕಾಗಿ ಭರತಭೂಮಿಯಲ್ಲಿ ಹಲವು ಜನ ಸಾಧುಸಂತರು, ಸತ್ಪುರುಷರು, ದಾರ್ಶನಿಕರು, ತ್ಯಾಗಿಗಳು ಅವತರಿಸಿದ್ದಾರೆ. ಅವರೆಲ್ಲ ಆಯಾ ಕಾಲಘಟ್ಟದಲ್ಲಿ ಜನತೆಯಲ್ಲಿನ ಮೌಢ್ಯಗಳನ್ನು ತೊಡೆದುಹಾಕಲು ಶ್ರಮಿಸಿದ್ದಾರೆ. ವೀರರಾಗಿ, ವಿರಾಗಿಯಾಗಿ, ಸಮಾಜ ಸುಧಾರಕರಾಗಿ, ಸಾಂಸ್ಕೃತಿಕ ನಾಯಕರಾಗಿ, ಸಮುದಾಯದ ರಕ್ಷಕರಾಗಿ ಖ್ಯಾತಿ ಪಡೆದವರು ಸಂತ ಗುರು ಶ್ರೀ ಸೇವಾಲಾಲ್‌ರು.

ಬಂಜಾರ ಸಮುದಾಯದಲ್ಲಿ ಬದುಕಿದ್ದ ಅರವತ್ತಕ್ಕೂ ಹೆಚ್ಚು ವೀರರಲ್ಲಿ ಆದ್ಯಪುರುಷ ಸೇವಾಲಾಲರೂ ಒಬ್ಬರು. ಇವರ ಕುರಿತು ಜನಪದ ಕಥೆಗಳು, ಕಥನ ಕಾವ್ಯಗಳು ಇವೆ. ಅಂತೆಯೆ ಬಂಜಾರರು ತಮ್ಮ ಬದುಕಿನಲ್ಲಿ ಸೇವಾಭಾಯಾನಿಗೆ ಮಹತ್ವದ ಸ್ಥಾನ ನೀಡಿದ್ದಾರೆ ಎಂದರು.

ಬಾಗಲಕೋಟಿ ತೋ.ವಿ.ವಿ ಸಂಶೋಧನಾ ನಿರ್ದೇಶಕ ಡಾ. ಮಹೇಶ್ವರಪ್ಪ ಹೆಚ್.ಪಿ ಅವರು ಸಂತ ಸೇವಾಲಾಲರ ವ್ಯಕ್ತಿತ್ವವನ್ನು ವಿವರಿಸುತ್ತಾ ಅವರ ತತ್ವಗಳಾದ ವನ್ಯ ಜೀವ ಹಾಗೂ ಪರಿಸರ ರಕ್ಷಣೆ ಹಾಗೂ ಆದರ್ಶದ ಬಗ್ಗೆ ವಿವರಿಸಿದರು.

ಕುಮಾರಿ ಭುವನೇಶ್ವರಿ ಸಂತ ಸೇವಾಲಾಲರ ಇವರು ನಡೆದು ಬಂದ ದಾರಿ ಬಗ್ಗೆ ವಿವರಿಸಿದರು. ಕಾರ್ಯಕ್ರದಲ್ಲಿ ಎನ್.ಎಸ್.ಎಸ್ ಘಟಕದ ಅಧಿಕಾರಿಂ ಡಾ. ಎ.ಎಮ್. ನಧಾಫ, ಸಹಾಯಕ ಪ್ರಾಧ್ಯಾಪಕರಾದ ಡಾ. ಮಹಾಂತೇಶ ನಾಯಕ ಬಿ.ಎನ್ ಉಪಸ್ಥಿತರಿದ್ದರು,

ಭೋಧಕ, ಬೋಧಕೇರ ಸಿಬ್ಬಂದಿವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು. ಸ್ಪೂರ್ತಿ ಪಾಟೀಲ ಹಾಗೂ ಸಂಘಡಿಗರು ಪ್ರಾರ್ಥಿಸಿದರು, ಮಹಾದೇವ ನಿರೂಪಿಸಿದರು ಮತ್ತು ಕುಮಾರಿ ಸುಮಾ ವಂದಿಸಿದರು.

## ವ್ಯಕ್ತಿ ನಾಪತ್ತೆ



ಬೆಳಗಾವಿ : ಬೆಳಗಾವಿಯ ಮಾಹಲಕ್ಷ್ಮಿ ಕಾಲನಿ ಆದರ್ಶ ನಗರ ವಡಗಾವಿಯ ನಿವಾಸಿಯಾದ ವಿಜಯ ಮಾಹಾದೇವ ಯಳ್ಳೂರಕರ (52) ಇವರು ಫೆ.9, 2023 ರಂದು ಮುಂಜಾನೆ 8 ಗಂಟೆಯಿಂದ ಕಾಣೆಯಾಗಿದ್ದಾರೆ ಎಂದು ಈತನ ಮಗ ಶಹಾಪೂರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕಾಣೆಯಾದ ವ್ಯಕ್ತಿಯು 5 ಪೂಟ 2 ಇಂಚ ಎತ್ತರವಿದ್ದು, ಕೂಲುಮುಖ, ನೆಟ್ಟನೆಮೂಗು, ಸಾಧಾರಣ ಮೈಕಟ್ಟು, ಗೋದಿಗೆಂಪು ಮೈಬಣ್ಣ ಹೊಂದಿರುತ್ತಾನೆ. ಹಾಗೂ ಕನ್ನಡ, ಮರಾಠಿ, ಹಿಂದಿ ಭಾಷೆ ಮಾತನಾಡುತ್ತಾನೆ ಮತ್ತು ಬಿಳಿ ಬಣ್ಣದ ಟೀ ಶರ್ಟ, ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ.

ಕಾಣೆಯಾದ ವ್ಯಕ್ತಿ ಬಗ್ಗೆ ಮಾಹಿತಿ ದೊರಕಿದಲ್ಲಿ ಪೊಲೀಸ್ ಆಯುಕ್ತರು, ಬೆಳಗಾವಿ ರವರಿಗೆ ಅಥವಾ ಪೊಲೀಸ್ ಇನ್ಸಪೆಕ್ಟರ, ಶಹಾಪೂರ ಪೊಲೀಸ ಠಾಣೆ ಬೆಳಗಾವಿ ರವರಿಗೆ ಸಂಪರ್ಕಿಸಬಹುದು ಅಥವಾ ಬೆಳಗಾವಿ ನಗರ ಪೊಲೀಸ್ ಕಂಟ್ರೋಲ್ ರೂಮ್ 0831–2405233, ಶಹಾಪೂರ ಪೊಲೀಸ ಠಾಣೆ, ಬೆಳಗಾವಿ. ದೂರವಾಣಿ ಸಂ–0831–2405244, ಪಿ.ಐ, ಶಹಾಪೂರ 9480804046, ಪಿ.ಎಸ್.ಐ ಶಹಾಪೂರ 9480804104 ದೂರವಾಣಿ ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಶಹಾಪೂರ ಪೊಲೀಸ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೂಡಲಗಿ ಬಸ್ ನಿಲ್ದಾಣದಲ್ಲಿ ಮೂಲಭೂತ ಸೌಕರ್ಯಕ್ಕೆ ಆಗ್ರಹಿಸಿ ಕೆಆರ್‌ಎಸ್‌ದಿಂದ ಪ್ರತಿಭಟನೆ

ಮೂಡಲಗಿ: ಪಟ್ಟಣದ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರಿಗೆ ಶೌಚಾಲಯ ಹಾಗೂ ಕುಡಿಯುವ ನೀರು, ಕುಳಿತುಕೊಳ್ಳುವ ಆಸನ ಹೀಗೆ ಅನೇಕ ಸಮಸ್ಯೆಗಳಿಂದ ಪ್ರಯಾಣಿಕರು ಹಲವು ವರ್ಷಗಳಿಂದ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಕೆ.ಆರ್. ಎಸ್ ಪಕ್ಷದ ತಾಲೂಕಾಧ್ಯಕ್ಷ ಅಬ್ದುಲ್ ಪೈಲ್ವಾನ್ ಹೇಳಿದರು.

ಗುರುವಾರದಂದು ಪಟ್ಟಣದ ಬಸ್ ನಿಲ್ದಾಣದಲ್ಲಿ ಕರ್ನಾಟಕ ರಾಷ್ಟ್ರ ಸಮಿತ ಪಕ್ಷದ ತಾಲೂಕಾ ಘಟಕದ ಕಾರ್ಯಕರ್ತ–ರಿಂದ ಪ್ರತಿಭಟನೆ ನಡೆಸಿ, ಬಸ್ ನಿಲ್ದಾಣ–ಕ್ಕೆ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಆಗ್ರಹಿಸಿ ಸ್ಥಳೀಯ ಬಸ್ ನಿಲ್ದಾಣದ ವ್ಯವಸ್ಥಾಪಕರಿಂದ




ಮೇಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ ನಂತರ ಮಾತನಾಡಿದ ಅವರು, ಈಗಾಗಲೇ ನಿಲ್ದಾಣದಲ್ಲಿ ಮಹಿಳೆಯರಿಗೆ ಪ್ರತ್ಯೇಕ ಶೌಚಾಲಯ ನಿರ್ಮಿಸಿ ಕೆಲವು ವರ್ಷಗಳೇ ಕಳೆದಿದೆ ಆದರೆ ಶೌಚಾಲಯ ನಿರ್ಮಾಣವಾದ ದಿನದಿಂದ ಶೌಚಾಲಯವನ್ನು ಉಪಯೋಗಿಸಲು ಬಿಡದೇ ಬೀಗ ಜಡಿಯಲಾಗಿದೆ. ಮಹಿಳಾ ಪ್ರಯಾಣಿಕರ ಗೋಳು ಕೇಳುವವರು ಯಾರು ಎಂದರು.

ಇನ್ನೂ ಬೇರೆ ಬೇರೆ ಊರುಗಳಿಂದ ಬಂದ ಮಹಿಳಾ ಪ್ರಯಾಣಿಕರು ಶೌಚಾಲಯಕ್ಕೆ ಬಸ್ ನಿಂದ ಕೆಳಗಿಳಿದು ಅವಸರವಾಗಿ ಶೌಚಾಲಯಕ್ಕೆ ತೆರಳಿದರೇ ಬೀಗ ಹಾಕಿರುವ ಶೌಚಾಲಯ ಕಂಡು ಇಲಾಖೆಯ ಅಧಿಕಾರಿಗಳಿಗೆ ಹಿಡಿಶಾಪ ಹಾಕುವಂತ ಪರಿಸ್ಥಿತಿ ನಿರ್ಮಾಣವಾಗಿದೆ. ಆದರಿಂದ ಒಂದು ವಾರ ಇಲಾಖೆಯ ಅಧಿಕಾರಿಗಳಿಗೆ ಗಡವು ನೀಡುತ್ತವೆ ಶಿಘ್ರವಾಗಿ ಮೇಲಾಧಿಕಾರಿಗಳು ಬಸ್ ನಿಲ್ದಾಣಕ್ಕೆ ಬೇಕಾಗಿರುವ ಮೂಲಭೂತ ಸೌಕರ್ಯಗಳನ್ನು ನೀಡದಿದ್ದರೇ ಬಸ್ ನಿಲ್ದಾಣದಲ್ಲಿ ಉಗ್ರವಾದ ಹೋರಾಟ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಕೆ.ಆರ್.ಎಸ್ ಪಕ್ಷದ ಮಹಿಳಾ ಘಟಕದ ಅಧ್ಯಕ್ಷೆ ಸೂರಮ್ಮ ಡಾಂಗೆ ಮಾತನಾಡಿ, ಬಸ್ ನಿಲ್ದಾಣದಲ್ಲಿ ಇರುವ ಸಾರ್ವಜನಿಕರ ಶೌಚಾಲಯದ ಸುತ್ತಲಿನ ಪರಿಸರದಲ್ಲಿ ದುರ್ವಾಸನೆ ಬೀರುತ್ತಿದ್ದು ಇದರಿಂದ ಮಹಿಳಾ ಪ್ರಯಾಣಿಕರಿಗೆ ಮೂಗು ಮುಚ್ಚಿ ಹೋಗುವಂತ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅಧಿಕಾರಿಗಳ ವಿರುದ್ದ ಆಕ್ರೋಶ ವ್ಯಕ್ತಡಿಸಿದರು.

ಈ ಸಂದರ್ಭದಲ್ಲಿ ಕೆ.ಆರ್.ಎಸ್ ಪಕ್ಷದ ಕಾರ್ಯಕರ್ತರಾದ ರಾಜೇಂದ್ರ ಪಾಟೀಲ, ಗಣಪತಿ ಬಡಿಗೇರ, ಸಿದ್ದಪ್ಪ ಡಾಂಗೆ, ಅನೀಲ ಗೌಡ, ರಫೀಕ ಪೈಲ್ವಾನ್, ಶಿವಕುಮಾರ ನಾವಿನ, ವಿಜಯ ಮಾದಿಗರ, ಬಾಸ್ಕರ ಡಾಂಗೆ, ಗೋಪಾಲ ನಾಯಕ್, ಸಿಂವಚಂದ್ರ ಗೊಂಡಲೆ, ಮಾದೇವ ಹುಚ್ಚನ್ನವರ ಹಾಗೂ ಅನೇಕರು ಇದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089